₹ 6 @vishwavaninews epaper.vishwavani.news vishwavani.news ಬೆಂಗಳೂರು । ಹುಬ್ಬಳ್ಳಿ । ಮಂಗಳೂರು । ದಾವಣಗೆರೆ । ಕಲಬುರಗಿ । ಬೆಳಗಾವಿ ಸೋಮವಾರ 28.04.2025 ಸಂಪುಟ: 10 ಸಂಚಿಕೆ:103 ಪುಟಗಳು: 12 ಪ್ರಧಾನ ಸಂಪಾದಕ: ವಿಶ್ವೇಶ್ವರ ಭಟ್

ವಿಶ್ವವಾಣಿ
ವಿಶ್ವಾಸವೇ ವಿಶ್ವ

ಆರ್‌ಸಿಬಿ ವಿಕ್ರಮ
ನಾಲ್ಕರ ಘಟ್ಟಕ್ಕೆ ಒಂದೇ ಹೆಜ್ಜೆ

ಕೃನಾಲ್ ಪಾಂಡ್ಯ (73) ಮತ್ತು ವಿರಾಟ್ ಕೊಹ್ಲಿ (51) ಅವರ ಅರ್ಧಶತಕ ಮತ್ತು ಭುವನೇಶ್ವರ ಕುಮಾರ್ ಅವರ 3 ವಿಕೆಟ್ ಸಾಧನೆಯೊಂದಿಗೆ ಡೆಲ್ಲಿ ಕ್ಯಾಪಿಟಲ್ಸ್ ಎದುರು ಆರ್‌ಸಿಬಿ ಆರು ವಿಕೆಟ್‌ಗಳ ಗೆಲುವು ಸಾಧಿಸಿದೆ.

ಸೊಂಪಾದ ಪುಟಗಳು



ಹನುಮಂತ ಹಗ್ಗ ತಿನ್ನುವಾಗ ಪೂಜಾರಿಗೆಲ್ಲಿ ಶಾವಿಗೆ?

ಮೂರ್ತಿಪೂಜೆ
ಆರ್.ಟಿ.ವಿಠ್ಠಲಮೂರ್ತಿ

6

ಇವರೆಲ್ಲ ಒಂದೇ ಸುಳ್ಳಿನ ಮಾರಾಟಗಾರರೇ!

ವಿದೇಶವಾಸಿ
ಕಿರಣ್ ಉಪಾಧ್ಯಾಯ ಬಹ್ರೈನ್

7

ದಾರಿದೀಪೋಕ್ತಿ

ನೀವು ಹಿಂದಕ್ಕೆ ಹೋಗಿ ಆರಂಭವನ್ನು ಬದಲಿಸಲು ಸಾಧ್ಯವಿಲ್ಲ. ಆದರೆ ಈಗ ನೀವು ಎಲ್ಲಿದ್ದೀರೋ ಅಲ್ಲಿಯೇ ಹೊಸ ಆರಂಭಕ್ಕೆ ಚಾಲನೆ ನೀಡಿ, ಅದರ ಕೊನೆಯನ್ನು ಬದಲಿಸಬಹುದು.

ವಕ್ರತುಂಡೋಕ್ತಿ

ಆಫೀಸಿನಲ್ಲಿ ಎಲ್ಲ ಸಿಬ್ಬಂದಿ ಎಷ್ಟು ಗಂಟೆಗೆ ಬರುತ್ತಾರೆ ಎಂಬುದು ಬಾಸ್ ಎಷ್ಟು ಗಂಟೆಗೆ ಬರುತ್ತಾರೆ ಎಂಬುದನ್ನು ಅವಲಂಬಿಸಿರುತ್ತದೆ.

2ನೇ ವರ್ಷದ ಸಾಧನಾ ಸಮಾವೇಶದಲ್ಲಿ ಸಿಎಂ

80 ಸಾವಿರ ಕೋಟಿ ರು. ಜನರ ಜೇಬಿಗೆ

ದೇವನಹಳ್ಳಿ: ರಾಜ್ಯ ಸರಕಾರದ ಗ್ಯಾರಂಟಿ ಯೋಜನೆಗಳ ಮೂಲಕ ಇಲ್ಲಿಯವರೆಗೆ 80 ಸಾವಿರ ಕೋಟಿ ರು.ಗಳನ್ನು ಜನರ ಜೇಬಿಗೆ ಹಾಕಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಸರಕಾರದ ಎರಡು ವರ್ಷದ ಸಾಧನಾ ಸಮಾವೇಶದಲ್ಲಿ ಗ್ರಾಮಾಂತರ ಜಿಲ್ಲೆಯ ವಿವಿಧ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ನೆರವೇರಿಸಿದ ಬಳಿಕ ಫಲಾನುಭವಿಗಳಿಗೆ ಸವಲತ್ತು ವಿತರಿಸಿ ಮಾತನಾಡಿ, ಗ್ರಾಮಾಂತರ ಜಿಲ್ಲೆಯಲ್ಲಿ ಸಾವಿರ ಸಾವಿರ ಕೋಟಿ ವೆಚ್ಚದ ಕಾಮಗಾರಿಗಳಿಗೆ ಒಂದೇ ದಿನ ಚಾಲನೆ ನೀಡಿದ್ದೇವೆ. ಅಭಿವೃದ್ಧಿಗೆ ಹಣ ಇಲ್ಲ ಎನ್ನುವ ಬಿಜೆಪಿ ಪರಿವಾರದ ಸುಳ್ಳುಗಳಿಗೆ ಅಭಿವೃದ್ಧಿ ಮೂಲಕವೇ ಉತ್ತರ ನೀಡುತ್ತಿದ್ದೇವೆ ಎಂದರು.

ಮೇ 20ರೊಳಗೆ ಸಿಇಟಿ ಫಲಿತಾಂಶ

ಬೆಂಗಳೂರು: ದ್ವಿತೀಯ ಪಿಯುಸಿ ಪರೀಕ್ಷೆ-2 ಫಲಿತಾಂಶ ಪ್ರಕಟವಾದ ನಂತರ ಮೇ 20ರ ವೇಳೆಗೆ ಸಿಇಟಿ ಫಲಿತಾಂಶ ಪ್ರಕಟವಾಗುವ ನಿರೀಕ್ಷೆಯಿದೆ. ದ್ವಿತೀಯ ಪಿಯುಸಿ-1 ಮತ್ತು 2ರ ಪರೀಕ್ಷೆಯ ಫಲಿತಾಂಶದ ನಂತರ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಿಇಟಿ ಫಲಿತಾಂಶ ಪ್ರಕಟಿಸಿ ರ‍್ಯಾಂಕ್ ಪಟ್ಟಿ ಬಿಡುಗಡೆ ಮಾಡಲಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

ರಾಜ್ಯದಲ್ಲಿ ವಾರ ಪೂರ್ತಿ ಮಳೆ

ಬೆಂಗಳೂರು: ರಾಜ್ಯದ ಹೆಚ್ಚಿನ ಜಿಲ್ಲೆಗಳಲ್ಲಿ ಈ ವಾರ ಸೇರಿದಂತೆ ಮೇ ಮೊದಲ ವಾರ ಮಳೆಯಾಗಲಿದೆ. ಬೆಂಗಳೂರು ನಗರದಲ್ಲೂ ವಾರ ಪೂರ್ತಿ ಗುಡುಗು ಮಳೆಯ ಎಚ್ಚರಿಕೆ ನೀಡಲಾಗಿದೆ.ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಕೆಲವು ಕಡೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಧಾರವಾಡ, ಹಾವೇರಿ, ಗದಗ ಮತ್ತು ಕೊಪ್ಪಳದಲ್ಲಿ ಆಲಿಕಲ್ಲು ಮಳೆ, ಬಾಗಲಕೋಟೆ, ರಾಯಚೂರು, ಯಾದಗಿರಿ, ದಾವಣಗೆರೆ, ಬಳ್ಳಾರಿ, ಚಿಕ್ಕಮಗಳೂರು, ಹಾಸನ, ಶಿವಮೊಗ್ಗ ಮತ್ತು ಕೊಡಗಿನಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಉಳಿದ ಜಿಲ್ಲೆಗಳಲ್ಲಿ ಒಣ ಹವೆ ಇರಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

9 ಭಯೋತ್ಪಾದಕರ ಮನೆ ಧ್ವಂಸ, ಅಖಾಡಕ್ಕಿಳಿದ ಎನ್‌ಐಎಗೆ ಮತ್ತಷ್ಟು ಸಾಕ್ಷ್ಯ ಲಭ್ಯ, ಉಗ್ರ ಕಾರಸ್ಥಾನ ಬಯಲು । ಪಾಕಿಗಳ ವಾಪಸ್‌ಗೆ ಗಡುವು ಅಂತ್ಯ, 629 ಭಾರತೀಯರು ವಾಪಸ್, ಉಕ್ಕೇರಿದ ಝೇಲಂ ನದಿ, ಪಿಒಕೆ ಜಲಾವೃತ: ಜಲಸಮರಕ್ಕೆ ಬೆಚ್ಚಿಬಿದ್ದ ಪಾಕ್

ಉಗ್ರರಿಗೆ ಮರ್ಮಾಘಾತ

ಶ್ರೀನಗರ/ ದೆಹಲಿ: ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕರ ದಾಳಿಯ ನಂತರ ಉಗ್ರರ ವಿರುದ್ಧದ ಕಾರ್ಯಾಚರಣೆಯನ್ನು ಮತ್ತಷ್ಟು ತೀವ್ರಗೊಳಿಸಿರುವ ಭದ್ರತಾ ಪಡೆ ಮತ್ತೆ ಮೂವರು ಉಗ್ರರ ಮನೆಗಳನ್ನು ಧ್ವಂಸಗೊಳಿಸಿದೆ. ಈ ಮೂಲಕ ಕಳೆದ ಮೂರು ದಿನಗಳಲ್ಲಿ 9 ಉಗ್ರರ ಮನೆಗಳನ್ನು ಧ್ವಂಸಗೊಳಿಸಿದಂತಾಗಿದೆ.

ಜಮ್ಮು ಮತ್ತು ಕಾಶ್ಮೀರದ ಬಂಡಿಪೋರಾ, ಪುಲ್ವಾಮಾ ಮತ್ತು ಶೋಪಿಯಾನ್ ಜಿಲ್ಲೆಗಳಲ್ಲಿ ಕಾರ್ಯಾಚರಣೆ ನಡೆಸಿ ಮೂವರು ಉಗ್ರರ ಮನೆಗಳನ್ನು ನೆಲಸಮ ಮಾಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಶೋಪಿಯಾನ್ ಜಿಲ್ಲೆಯಲ್ಲಿ ಕಳೆದ ವರ್ಷ ಭಯೋತ್ಪಾದಕ ಸಂಘಟನೆಗೆ ಸೇರಿದ್ದ ಅದ್ನಾನ್ ಶಫಿಯ ಮನೆಯನ್ನು ನೆಲಸಮಗೊಳಿಸಲಾಗಿದೆ. ಪುಲ್ವಾಮಾದಲ್ಲಿ ಸಕ್ರಿಯ ಉಗ್ರ ಅಮೀರ್ ನಜೀರ್ ಮತ್ತು ಬಂಡಿಪೋರಾದಲ್ಲಿ ಲಷ್ಕರೆ ತಯ್ಬಾದ (ಎಲ್‌ಇಟಿ) ಉಗ್ರ ಜಮೀಲ್ ಅಹ್ಮದ್ ಶೇರ್‌ಗೊಜ್ರಿ ಮನೆಗಳನ್ನು ಧ್ವಂಸಗೊಳಿಸಲಾಗಿದೆ. ಇದೇ ವೇಳೆ ಉಗ್ರ ಆದಿಲ್ ಹುಸೇನ್ ಥೋಕರ್‌ನ ತಾಯಿ ಭದ್ರತಾಪಡೆಗಳಿಗೆ ಶರಣಾಗುವಂತೆ ಪುತ್ರನಿಗೆ ಮನವಿ ಮಾಡಿದ್ದಾರೆ. ಅನಂತ್‌ನಾಗ್ ಜಿಲ್ಲೆಯಲ್ಲಿ ಈತನ ಮನೆಯನ್ನೂ ಭದ್ರತಾ ಪಡೆಗಳು ಧ್ವಂಸ ಮಾಡಿವೆ. ಕಣಿವೆ ರಾಜ್ಯದೆಲ್ಲೆಡೆ ಸ್ಥಳೀಯ ಪೊಲೀಸರು, ಜಿಲ್ಲಾ ಅಧಿಕಾರಿಗಳ ಜತೆ ಸೇರಿ ಭದ್ರತಾ ಪಡೆ ಉಗ್ರನಿಗ್ರಹ ಕಾರ್ಯಾಚರಣೆ ಆರಂಭಿಸಿದ್ದು, ಉಗ್ರ ಪಟ್ಟಿಯಲ್ಲಿರುವವರ ಆಸ್ತಿಗಳನ್ನು ಧ್ವಂಸಗೊಳಿಸಿವೆ. ಅನುಮಾನ ಬಂದವರ ಮನೆಗಳನ್ನು ಹುಡುಕಿ ಶಸ್ತ್ರಾಸ್ತ್ರ ಪತ್ತೆ ಮಾಡುತ್ತಿದ್ದಾರೆ. ಉಗ್ರರಿಗೆ ಸಹಕಾರ ನೀಡಿದ ಆರೋಪದಡಿ ನೂರಾರು ಮಂದಿ ಸಹಚರರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

ಪುಲ್ವಾಮಾದಲ್ಲಿ ಧ್ವಂಸಗೊಂಡ ಉಗ್ರ ಅಮೀರ್ ನಜೇರ್ ಮನೆ

ಎನ್‌ಐಎಗೆ ಸಿಕ್ತು ವಿಡಿಯೋ ಸಾಕ್ಷಿ

ಪಹಲ್ಗಾಮ್ ದಾಳಿ ಕುರಿತು ತನಿಖೆ ಶುರು ಮಾಡಿರುವ ರಾಷ್ಟ್ರೀಯ ತನಿಖಾ ಸಂಸ್ಥೆಗೆ (ಎನ್‌ಐಎ) ರೀಲ್ಸ್ ವಿಡಿಯೋ ಗ್ರಾಫರ್‌ವೊಬ್ಬರು ಮರದ ಮೇಲಿಂದ ಕುಳಿತು ತೆಗೆದ ಇಡೀ ಕೃತ್ಯದ ಪ್ರಮುಖ ಸಾಕ್ಷಿ ಲಭ್ಯವಾಗಿದೆ. ಬೈಸರನ್‌ನಲ್ಲಿ ಪ್ರವಾಸಿಗರಿಗಾಗಿ ರೀಲ್ಸ್ ಚಿತ್ರೀಕರಿಸುತ್ತಿದ್ದ ಸ್ಥಳೀಯ ವಿಡಿಯೊಗ್ರಾಫರ್ ದಾಳಿ ವೇಳೆ ಮರ ಏರಿ ಕುಳಿತಿದ್ದರು. ಅಲ್ಲಿಂದಲೇ ಉಗ್ರರು ಪ್ರವಾಸಿಗರ ಮೇಲೆ ಗುಂಡಿನ ಮಳೆಗರೆಯುವ ದೃಶ್ಯವನ್ನು ಸೆರೆ ಹಿಡಿದಿದ್ದಾರೆ. ಇದೀಗ ಎನ್‌ಐಎಗೆ ಈ ವಿಡಿಯೋ ಗ್ರಾಫರ್ ಪ್ರಮುಖ ಸಾಕ್ಷಿಯಾಗಿದ್ದಾರೆ.

ಸದ್ಯ ಲಭ್ಯವಾಗಿರುವ ವಿಡಿಯೋ ಪ್ರಕಾರ, ಈ ಕಾರ್ಯಾಚರಣೆಯಲ್ಲಿ ನಾಲ್ವರು ಉಗ್ರರು ಭಾಗಿಯಾಗಿದ್ದಾರೆ. ಇಬ್ಬರು ಹುಲ್ಲುಗಾವಲು ಪ್ರದೇಶದ ಎರಡೂ ಬದಿ ಅವಿತುಕೊಂಡಿದ್ದರೆ, ಮತ್ತಿಬ್ಬರು ಅಲ್ಲೇ ಇದ್ದ ತಿಂಡಿ ಅಂಗಡಿ ಬಳಿ ಅವಿತಿದ್ದರು. ಮಧ್ಯಾಹ್ನ 2.30ರ ಸುಮಾರಿಗೆ ಭಯೋತ್ಪಾದಕರು ಸ್ಥಳೀಯರಲ್ಲದವರನ್ನು ಧರ್ಮದ ಬಗ್ಗೆ ಕೇಳುತ್ತಾ ಬಂದು ಕಲಿಮಾ ಪಠಿಸಲು ಸಾಧ್ಯವಾಗದವರನ್ನು ಪಾಯಿಂಟ್ ಬ್ಲಾಕ್‌ನಲ್ಲಿ ಶೂಟ್ ಮಾಡುತ್ತಾ ಬಂದರು. ಜನರು ದಿಕ್ಕಾಪಾಲಾಗಿ ಓಡುತ್ತಿದ್ದಂತೆ ಹುಲ್ಲುಗಾವಲಿನ ಜಿಪ್‌ಲೈನ್‌ನಲ್ಲಿ ಅವಿತಿದ್ದವರೂ ಗುಂಡು ಹಾರಿಸಲು ಶುರು ಮಾಡಿದ್ದರು. ಈ ಎಲ್ಲಾ ದೃಶ್ಯಗಳು ಕ್ಯಾಮೆರಾದಲ್ಲಿ ಸೆರೆಯಾಗಿದೆ ಎಂದು ವರದಿಗಳು ತಿಳಿಸಿವೆ. ಇದೇ ವೇಳೆ ಘಟನೆಯನ್ನು ಕಣ್ಣಾರೆ ಕಂಡ ಪ್ರತ್ಯಕ್ಷದರ್ಶಿಗಳ ವಿಚಾರಣೆ ನಡೆಸುತ್ತಿದೆ.

ದೇಶ ತೊರೆಯುವ ಗಡುವು ಅಂತ್ಯ

ಪಹಲ್ಗಾಮ್ ದಾಳಿ ಬಳಿಕ ಸಾರ್ಕ್ ವೀಸಾ ದಡಿ ಭಾರತಕ್ಕೆ ಆಗಮಿಸಿರುವ ಪಾಕಿಸ್ತಾನದ ಪ್ರಜೆಗಳಿಗೆ ದೇಶ ಬಿಟ್ಟು ತೆರಳಲು ವಿಧಿಸಿದ್ದ ಗಡುವು ಭಾನುವಾರ ಅಂತ್ಯಗೊಂಡಿದೆ. ಅಟ್ಟಾರಿ-ವಾಘಾ ಗಡಿ ಮೂಲಕ ಕಳೆದ ಎರಡು ದಿನಗಳಲ್ಲಿ 300ಕ್ಕೂ ಹೆಚ್ಚು ಪಾಕಿಸ್ತಾನಿ ಪ್ರಜೆ ಗಳು ಭಾರತವನ್ನು ತೊರೆದಿದ್ದಾರೆ. ಇನ್ನೂ ನೂರಾರು ಮಂದಿ ಭಾರತ ತೊರೆಯುವ ನಿರೀಕ್ಷೆಯಿದೆ. 13 ರಾಜತಾಂತ್ರಿಕರು ಮತ್ತು ಅಧಿಕಾರಿಗಳು ಸೇರಿದಂತೆ 629 ಭಾರತೀಯರು ಪಾಕಿಸ್ತಾನದಿಂದ ಮರಳಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಸಾರ್ಕ್ ವೀಸಾಗಳನ್ನು ಹೊಂದಿರುವವರು ಭಾರತದಿಂದ ನಿರ್ಗಮಿಸಲು ಗಡುವು ಏ.26 ಆಗಿತ್ತು. ವಿದ್ಯಾರ್ಥಿ ವೀಸಾ, ಬ್ಯುಸಿನೆಸ್ ವೀಸಾ, ಯಾತ್ರಿಕರ ವೀಸಾ ಸೇರಿದಂತೆ ಉಳಿದ ವರಿಗೆ ಏ.27ರೊಳಗೆ ದೇಶ ತೊರೆಯಲು ಸೂಚಿಸಲಾಗಿದೆ.

ಉಗ್ರರಿಗೆ ತಕ್ಕ ಶಾಸ್ತಿ: ಮೋದಿ

ಪ್ರಧಾನಿ ನರೇಂದ್ರ ಮೋದಿ ತಮ್ಮ 121ನೇ ಮನ್ ಕಿ ಬಾತ್ ಕಾರ್ಯಕ್ರಮದಲ್ಲೂ ಪಹಲ್ಗಾಮ್ ದಾಳಿಯನ್ನು ತೀವ್ರವಾಗಿ ಖಂಡಿಸಿದ್ದು ಈ ಘಟನೆಯಿಂದ ಇಡೀ ಭಾರತೀಯರ ರಕ್ತವು ಕುದಿಯುತ್ತಿದೆ. ಮೃತರ ಕುಟುಂಬಕ್ಕೆ ಖಂಡಿತವಾಗಿಯೂ ನ್ಯಾಯವು ಸಿಕ್ಕೇ ಸಿಗುತ್ತದೆ. ದಾಳಿಕೋರರ ವಿರುದ್ಧ ಅತ್ಯಂತ ಕಠೋರ ಕ್ರಮ ತೆಗೆದುಕೊಳ್ಳಲಾಗುತ್ತದೆ ಎಂದು ಪ್ರತಿಜ್ಞೆ ಮಾಡಿದರು. ಇಡೀ ಜಗತ್ತು ಉಗ್ರರ ದಾಳಿಯನ್ನು ವಿರೋಧಿಸಿದೆ. ಕಾಶ್ಮೀರದಲ್ಲಿ ಅಭಿವೃದ್ಧಿ ಪಥದಲ್ಲಿದೆ. ಪ್ರಜಾಪ್ರಭುತ್ವವು ನೆಲೆಯಾಗಿದೆ. ಪ್ರವಾಸೋದ್ಯಮವು ಬೆಳೆಯುತ್ತಿದೆ. ಯುವಕರಿಗೆ ಹೊಸ ಅವಕಾಶಗಳು ತೆರೆದುಕೊಳ್ಳುತ್ತಿವೆ. ಆದರೆ ಉಗ್ರರು ಮತ್ತು ಅವರ ಮಾಸ್ಟರ್‌ಗಳಿಗೆ ಕಾಶ್ಮೀರವು ಶಾಂತವಾಗಿರೋದು ಬೇಕಿಲ್ಲ ಎಂದು ಪ್ರಧಾನಿ ಟೀಕಿಸಿದರು.

ಪಿಒಕೆಯಲ್ಲಿ ತುರ್ತು ನೆರೆ ಪರಿಸ್ಥಿತಿ



ಇಸ್ಲಾಮಾಬಾದ್: ಸಿಂಧೂ ನದಿ ನೀರು ಹರಿಯುವುದನ್ನು ನಿಲ್ಲಿಸಿದರೆ ಭಾರತದಲ್ಲಿ ರಕ್ತದ ನದಿಯನ್ನು ಹರಿಸುತ್ತೇವೆ ಎಂದು ಹೇಳಿದ್ದ ಪಾಕಿಸ್ತಾನಕ್ಕೆ, ನೀರು ಹರಿಸುವ ಮೂಲಕವೇ ಭಾರತ ತಿರುಗೇಟು ನೀಡಿದೆ. ಝೇಲಂ ನದಿಗೆ ನೀರು ಹರಿಬಿಟ್ಟ ಪರಿಣಾಮ ಪಾಕ್ ಆಕ್ರಮಿತ ಪಾಕಿಸ್ತಾನ ದಲ್ಲಿ ಪ್ರವಾಹ ಪರಿಸ್ಥಿತಿ ಎದುರಾಗಿದ್ದು, ಮುಜಾಫರಾಬಾದ್‌ನಲ್ಲಿ ತುರ್ತು ನೆರೆ ಪರಿಸ್ಥಿತಿ ಘೋಷಿಸಲಾಗಿದೆ. ಮಸೀದಿಗಳಲ್ಲಿ ಈ ಬಗ್ಗೆ ಪ್ರಕಟಣೆ ಹೊರಡಿಸಿ ಜನರಿಗೆ ಎಚ್ಚರಿಕೆ ನೀಡಲಾಗಿದೆ. ಯಾವುದೇ ಪೂರ್ವಸೂಚನೆ ನೀಡದೇ ಭಾರತ ಏಕಾಏಕಿ ನದಿಗೆ ನೀರನ್ನು ಹರಿಸಿದೆ ಎಂದು ಪಾಕ್ ಮಾಧ್ಯಮಗಳು ಭಾರತದ ವಿರುದ್ಧ ಆರೋಪ ಮಾಡಿದೆ.

ಬ್ರಹ್ಮೋಸ್ ಕ್ಷಿಪಣಿ ಪರೀಕ್ಷೆ ಯಶಸ್ವಿ

ಇದೇ ವೇಳೆ ಭಾರತೀಯ ನೌಕಾಪಡೆಯು ಯಾವುದೇ ಕ್ಷಣ, ಎಲ್ಲಿಯೇ ಆದರೂ ರಾಷ್ಟ್ರದ ಕಡಲ ಹಿತಾಸಕ್ತಿಗಳನ್ನು ಕಾಪಾಡುವಲ್ಲಿ, ಭವಿಷ್ಯಕ್ಕೆ ಸಿದ್ಧವಾಗಿದೆ ಎಂದು ಹೇಳಿದೆ. ಅರಬ್ಬಿ ಸಮುದ್ರದಲ್ಲಿ ಭಾನುವಾರ ಶತ್ರು ರಾಷ್ಟ್ರಗಳ ಹಡಗುಗಳನ್ನು ಉಡಾಯಿಸಬಲ್ಲ ಬ್ರಹ್ಮೋಸ್ ಕ್ಷಿಪಣಿ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಿ ರುವ ನೌಕಾಪಡೆ ಅದರ ದೀರ್ಘ-ಶ್ರೇಣಿಯ ನಿಖರ ದಾಳಿಯ ಸಾಮರ್ಥ್ಯವನ್ನು ಪ್ರದರ್ಶಿ ಸಿದೆ.

ರಾಜನಾಥ್ ಸಿಂಗ್ ಸಭೆ

ಪಾಕಿಸ್ತಾನದ ವಿರುದ್ಧ ಮಿಲಿಟರಿ ಕಾರ್ಯಾಚರಣೆ ನಡೆಸಲೇಬೇಕೆಂಬ ದೇಶದ ಕೂಗಿಗೆ ಪೂರಕವಾಗಿ ಸೇನಾ ಪಡೆಗಳಲ್ಲೂ ಸಮರ ಸಿದ್ಧತೆ ನಡೆದಿದೆ. ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಭಾನುವಾರ ಭಾರತೀಯ ಸೇನೆಯ ಚೀಫ್ ಆಫ್ ಜನರಲ್ ಸ್ಟಾಫ್ ಜನರಲ್ ಅನಿಲ್ ಚೌಹಾಣ್ ಅವರೊಂದಿಗೆ ಸಭೆ ನಡೆಸಿ ಚರ್ಚಿಸಿದ್ದಾರೆ.

ಸಾಮಾಜಿಕ ಕಾರ್ಯಕರ್ತನ ಹತ್ಯೆ

ಉಗ್ರರ ವಿರುದ್ಧ ಕಾರ್ಯಾಚರಣೆ ಮುಂದುವರಿದಿರುವಂತೆಯೇ ಜಮ್ಮು ಮತ್ತು ಕಾಶ್ಮೀರದ ಕುಪ್ವಾರಾ ಜಿಲ್ಲೆಯ ಕಂಡಿಖಾಸ್ ಪ್ರದೇಶದಲ್ಲಿ ಉಗ್ರರು ಸಾಮಾಜಿಕ ಕಾರ್ಯಕರ್ತನನ್ನು ಗುಂಡಿಟ್ಟು ಕೊಂದಿದ್ದಾರೆ. ಆದರೆ ಇವರನ್ನು ಗುರಿಯಾಗಿಸಿ ಹತ್ಯೆ ಮಾಡಿದ ಉದ್ದೇಶ ತಿಳಿದು ಬಂದಿಲ್ಲ.

ಬಿಜೆಪಿಯಿಂದ ಅಪಪ್ರಚಾರ, ಅನಿವಾರ್ಯವಾದರೆ ಯುದ್ಧ ಮಾಡಬೇಕು ಎಂದ ಸಿದ್ದರಾಮಯ್ಯ

ಯುದ್ಧವೇ ಬೇಡ ಎಂದಿಲ್ಲ: ಸಿಎಂ ಸ್ಪಷ್ಟನೆ

ಬೆಂಗಳೂರು/ದೇವನಹಳ್ಳಿ: ಯುದ್ಧ ಅನಿವಾರ್ಯವಾದಾಗ ಮಾತ್ರ ಮಾಡಬೇಕು. ಯುದ್ಧದಿಂದಲೇ ಸಮಸ್ಯೆ ಪರಿಹಾರವಾಗಲು ಸಾಧ್ಯವಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಪಾಕಿಸ್ತಾನದ ಮೇಲೆ ಯುದ್ಧ ಮಾಡುವ ಅಗತ್ಯವಿಲ್ಲ ಎಂದಿದ್ದ ಸಿಎಂ ಹೇಳಿಕೆ ವಿವಾದಕ್ಕೆ ಕಾರಣವಾಗಿತ್ತು. ಈ ಹೇಳಿಕೆ ಪಾಕಿಸ್ತಾನದ ವಾಹಿನಿಗಳಲ್ಲೂ ಪ್ರಸಾರವಾಗಿತ್ತು. ಈ ಸಂಬಂಧ ಉಂಟಾದ ಪರ ವಿರೋಧ ಚರ್ಚೆಗೆ ಸಿಎಂ ಸ್ಪಷ್ಟನೆ ನೀಡಿದ್ದಾರೆ. ಭಾನುವಾರ ಸಾಮಾಜಿಕ ಜಾಲತಾಣದ ಎಕ್ಸ್ ನಲ್ಲಿ ಹೇಳಿಕೆ ಪೋಸ್ಟ್ ಮಾಡಿರುವ ಅವರು, ಯುದ್ಧದ ಕುರಿತು ನಾನು ನೀಡಿದ ಹೇಳಿಕೆಯ ಬಗ್ಗೆ ಪರ-ವಿರೋಧದ ಚರ್ಚೆಗಳು ನಡೆಯುತ್ತಿರುವುದನ್ನು ಗಮನಿಸಿದ್ದೇನೆ. ಯುದ್ಧ ಎನ್ನುವುದು ಯಾವುದೇ ದೇಶದ ಅಂತಿಮ ಆಯ್ಕೆಯೇ ಹೊರತು, ಮೊದಲ ಇಲ್ಲವೇ ಏಕೈಕ ಆಯ್ಕೆಯಲ್ಲ. ಶತ್ರುವನ್ನು ಮಣಿಸುವ ಉಳಿದೆಲ್ಲ ಆಯ್ಕೆಗಳು ವಿಫಲವಾದಾಗ ಮಾತ್ರ ಯುದ್ಧಕ್ಕೆ ಸಿದ್ಧರಾಗಬೇಕು ಎಂದು ಹೇಳಿದ್ದಾರೆ. ಪಹಲ್ಗಾಮ್‌ನಲ್ಲಿ ನಡೆದ ಪಾಕ್ ಪ್ರೇರಿತ ಉಗ್ರರ ದಾಳಿಗೆ ನಮ್ಮ ಗೂಢಚರ್ಯೆ ಮತ್ತು ಭದ್ರತಾ ವ್ಯವಸ್ಥೆಯ ವೈಫಲ್ಯ ಕಾರಣ ಎನ್ನುವುದು ದೇಶದ ಜನತೆಗೆ ಮತ್ತು ಕೇಂದ್ರ ಸರಕಾರಕ್ಕೂ ಈಗ ಮನವರಿಕೆಯಾಗಿದೆ. ಮೊದಲು ಈ ಲೋಪ ಸರಿಪಡಿಸಿಕೊಂಡು ಮುಂದಿನ ದಿನಗಳಲ್ಲಿ ಇಂತಹ ಕೃತ್ಯಗಳು ನಡೆಯದಂತೆ ಎಚ್ಚರಿಕೆ ವಹಿಸುವ ಹೊಣೆಗಾರಿಕೆ ಕೇಂದ್ರ ಸರಕಾರದ ಮೇಲಿದೆ ಎಂದು ತಿಳಿಸಿದ್ದಾರೆ.

→ 4

ಭಯೋತ್ಪಾದನೆಯನ್ನು ಬೇರು ಸಮೇತ ಕಿತ್ತು ಹಾಕುವುದು, ಪ್ರತಿಯೊಬ್ಬ ಭಾರತೀಯರಿಗೆ ಸೂಕ್ತ ರಕ್ಷಣೆ ಕೊಡುವುದು ನಮ್ಮ ಈ ಕ್ಷಣದ ಆದ್ಯತೆ. ಇದರಲ್ಲಿ ರಾಜಿ ಮಾಡಿಕೊಳ್ಳುವ ಪ್ರಶ್ನೆಯೇ ಇಲ್ಲ.
ಸಿದ್ದರಾಮಯ್ಯ, ಮುಖ್ಯಮಂತ್ರಿ

ಭಾರತದ ರಕ್ಷಣೆ ಮುಖ್ಯವಾಗಿದ್ದು, ಪಾಕಿಸ್ತಾನದ ವಿರುದ್ಧ ಕೇಂದ್ರ ಸರಕಾರ ತೆಗೆದುಕೊಂಡಿರುವ ತೀರ್ಮಾನಗಳಿಗೆ ಬದ್ಧ. ನಾವೆಲ್ಲರೂ ಭಾರತೀಯರು, ಎಲ್ಲರ ಪ್ರಾಣ ಕೂಡ ಮುಖ್ಯ. ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಪಕ್ಷದ ಕಾರ್ಯಕಾರಿ ಸಮಿತಿ ತೀರ್ಮಾನ ತೆಗೆದುಕೊಂಡಿದೆ. ಅದರಂತೆ ಕೇಂದ್ರ ಸರಕಾರದ ತೀರ್ಮಾನಕ್ಕೆ ಬದ್ಧ.
ಡಿ.ಕೆ.ಶಿವಕುಮಾರ್, ಡಿಸಿಎಂ

ಸಿಎಂ ಸಿದ್ದರಾಮಯ್ಯನವರ ದೃಷ್ಟಿಕೋನ ಖಂಡಿತ ಸರಿಯಲ್ಲ. ಇದು ಅಕ್ಷಮ್ಯ ಅಪರಾಧ. ಈ ರೀತಿಯ ಹೇಳಿಕೆ ಯಾರೂ ನಿರೀಕ್ಷಿಸಿರಲಿಲ್ಲ. ಸಿದ್ದರಾಮಯ್ಯನವರಿಗೆ ಅಲ್ಪಸಂಖ್ಯಾತರ ಬಗ್ಗೆ ಎಷ್ಟು ಪ್ರೀತಿ ಇದೆ ಹಾಗೂ ಅವರ ವಿಚಾರ ಬಂದಾಗ ಯಾವ ಮಟ್ಟಕ್ಕೂ ಇಳೀತಾರೆ ಎಂಬ ಸತ್ಯ ಜನರಿಗೆ ಗೊತ್ತಿದೆ.
ಬಿ.ವೈ.ವಿಜಯೇಂದ್ರ, ಬಿಜೆಪಿ ರಾಜ್ಯಾಧ್ಯಕ್ಷ

ಮನ್‌ಕಿ ಬಾತ್‌ನಲ್ಲಿ ಮುಧೋಳ ಕೃಷಿಕನ ಸಾಧನೆಗೆ ಪ್ರಧಾನಿ ಪ್ರಶಂಸೆ

ಬಿಸಿಲನಾಡಲ್ಲಿ ಸೇಬು ಕೃಷಿ: ಮೋದಿ ಫಿದಾ

ಬಾಗಲಕೋಟೆ: ಜಿಲ್ಲೆಯ ಮುಧೋಳ ತಾಲೂಕಿನ ಕುಳಲಿ ಗ್ರಾಮದಲ್ಲಿ ಸೇಬು ಬೆಳೆದು ಯಶಸ್ವಿಯಾದ ರೈತ ಶ್ರೀಶೈಲ ತೇಲಿ ಅವರ ಸಾಧನೆಯನ್ನು ಪ್ರಧಾನಿ ನರೇಂದ್ರ ಮೋದಿ ಮನ್ ಕಿ ಬಾತ್‌ನಲ್ಲಿ ಹಾಡಿ ಹೊಗಳಿದ್ದಾರೆ.

ಏಪ್ರಿಲ್ ತಿಂಗಳ 121ನೇ ಮನ್ ಕಿ ಬಾತ್‌ನಲ್ಲಿ ಮಾತನಾಡಿದ ಪ್ರಧಾನಿ ಮೋದಿ, ಪಹಲ್ಗಾಮ್ ದಾಳಿ, ಉಗ್ರ ಪೋಷಕರ ವಿರುದ್ಧ ಕಠಿಣ ಕ್ರಮ, ಅಗಲಿದ ಕಸ್ತೂರಿರಂಗನ್ ಅವರ ಕೊಡುಗೆಗಳನ್ನು ಸ್ಮರಿಸುವ ಜತೆಗೆ ಬಾಗಲಕೋಟದ ರೈತ ಶ್ರೀಶೈಲ ತೇಲಿ ಅವರ ಸಾಧನೆಯನ್ನು ಉಲ್ಲೇಖಿಸಿ ಕೊಂಡಾಡಿದ್ದಾರೆ. ಹಿಮಚ್ಛಾದಿತ ಪರ್ವತದ ತಪ್ಪಲು ಪ್ರದೇಶಗಳಲ್ಲಷ್ಟೇ ಹೆಚ್ಚಾಗಿ ಬೆಳೆಯುವ ಸೇಬು ಕೃಷಿಯನ್ನು ಈ ಕೃಷಿಗೆ ಯೋಗ್ಯವಲ್ಲದ ಕರ್ನಾಟಕದ ಬಯಲು ಸೀಮೆಯಲ್ಲಿ ಬೆಳೆಯುವ ಮೂಲಕ ಶ್ರೀಶೈಲ ಅವರು ಸಾಧನೆ ಮಾಡಿದ್ದಾರೆ.

ಕುಳಲಿ ಗ್ರಾಮದ ಸೇಬು ಬೆಳೆಯೊಂದಿಗೆ ರೈತ ಶ್ರೀಶೈಲ ತೇಲಿ.

ಇತರರಿಗೆ ಸ್ಫೂರ್ತಿಯಾಗಿದ್ದಾರೆ. ಅವರ ಕೃಷಿ ಪ್ರಯೋಗ ಮೆಚ್ಚುವಂತದ್ದು ಎಂದು ಪ್ರಧಾನಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. 35 ಡಿಗ್ರಿ ಸೆಲ್ಸಿಯಸ್‌ಗಿಂತ ಅಧಿಕ ಉಷ್ಣಾಂಶವಿರುವ ಪ್ರದೇಶದಲ್ಲಿ,

- 35 ಡಿ.ಸೆಲ್ಸಿಯಸ್‌ನಲ್ಲೂ ಸೇಬು ಬೆಳೆದು ಯಶಸ್ವಿ
- ಎರಡೂವರೆ ವರ್ಷಕ್ಕೆ 15 ಲಕ್ಷ ಆದಾಯ ಪಡೆದ ರೈತ
- ಕುಳಲಿ ಗ್ರಾಮದಲ್ಲಿ ಸೇಬು ರೈತ ಈಗ ದೇಶಕ್ಕೇ ಪರಿಚಿತ

ಏಳು ಎಕರೆಗಳಲ್ಲಿ ಶ್ರೀಶೈಲ್ ಸೇಬು ಬೆಳೆದಿದ್ದಾರೆ. ಸೇಬು ಬೆಳೆದು ಉತ್ತಮ ಆದಾಯ ಕೂಡ ಗಳಿಸಿದ್ದಾರೆ. ಎಕರೆಗೆ ವೆಚ್ಚ ತೆಗೆದು 3 ಲಕ್ಷ ರು. ಲಾಭ ಮಾಡುತ್ತಿದ್ದಾರೆ ಎಂದು ಮೋದಿ ತಮ್ಮ ಭಾಷಣದಲ್ಲಿ ಪ್ರಶಂಸೆ ವ್ಯಕ್ತಪಡಿಸಿದರು.

ಯಶಸ್ವಿ ಪ್ರಯೋಗ: ಮೂಲತಃ ಬೆಳಗಾವಿಯ ಅಥಣಿ ತಾಲೂಕಿನ ಮಹಿಷವಾಡಗಿ ಗ್ರಾಮದ ರೈತ ಶ್ರೀಶೈಲ ತೇಲಿ ಅವರು ಕೆಲ ವರ್ಷಗಳ ಹಿಂದೆ ಕುಳಲಿ ಗ್ರಾಮದ ವ್ಯಾಪ್ತಿಯಲ್ಲಿ ಜಮೀನು ಖರೀದಿ ಮಾಡಿದ್ದರು.

→ 4

ಸಮಾಚಾರ ಸಣ್ಣದಲ್ಲ

ಬೈಕ್ ಕಳ್ಳತನ: 25 ದ್ವಿಚಕ್ರ ವಾಹನ ವಶ

ಬೆಂಗಳೂರು: ಮನೆಗಳ ಮುಂಭಾಗ ಹಾಗೂ ಪಾರ್ಕಿಂಗ್ ಪ್ರದೇಶದಲ್ಲಿ ನಿಲ್ಲಿಸುತ್ತಿದ್ದ ದ್ವಿಚಕ್ರ ವಾಹನಗಳ ಹ್ಯಾಂಡಲ್ ಲಾಕ್ ಮುರಿದು ಕಳವು ಮಾಡುತ್ತಿದ್ದ ಮೂವರು ಆರೋಪಿಗಳನ್ನು ಮಹದೇವಪುರ ಪೊಲೀಸರು ಬಂಧಿಸಿದ್ದಾರೆ. ವರುಣ್ ಕುಮಾರ್, ಮೊಹಮ್ಮದ್ ಹಾಗೂ ಕದ್ದ ವಾಹನಗಳನ್ನು ಖರೀದಿಸಿದ್ದ ಮತ್ತೊಬ್ಬ ಆರೋಪಿಯನ್ನು ಬಂಧಿಸಿ, ₹35 ಲಕ್ಷ ಮೌಲ್ಯದ 25 ವಾಹನಗಳನ್ನು ಜಪ್ತಿ ಮಾಡಲಾಗಿದೆ. ಮಾರ್ಚ್ 6ರಂದು ಠಾಣಾ ವ್ಯಾಪ್ತಿಯ ಉದಯನಗರ ಗ್ರಾಮದ ನಿವಾಸಿಯೊಬ್ಬರು ಮನೆ ಮುಂದೆ ನಿಲ್ಲಿಸಿದ್ದ ವಾಹನ ಕಳವಾಗಿತ್ತು. ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ ಪೊಲೀಸರು, ವೈಟ್‌ಫೀಲ್ಡ್ ಠಾಣಾ ವ್ಯಾಪ್ತಿಯಲ್ಲಿ ಇಬ್ಬರನ್ನು ದ್ವಿಚಕ್ರ ವಾಹನ ಸಮೇತ ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ನಗರದ ವಿವಿಧೆಡೆ ದ್ವಿಚಕ್ರ ವಾಹನ ಕಳವು ಪ್ರಕರಣಗಳು ಪತ್ತೆಯಾಗಿವೆ. ಆರೋಪಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ, ಒಂಬತ್ತು ದಿನ ಕಸ್ಟಡಿಗೆ ಪಡೆದು ಹೆಚ್ಚಿನ ವಿಚಾರಣೆ ನಡೆಸಿದಾಗ ಕಳವು ಮಾಡಿದ ದ್ವಿಚಕ್ರ ವಾಹನ ಪೈಕಿ 12 ವಾಹನವನ್ನು ಹಾವೇರಿಯ ಕರ್ಜಗಿ ಗ್ರಾಮದ ವ್ಯಕ್ತಿಯೊಬ್ಬರಿಗೆ ಮಾರಾಟ ಮಾಡಿರುವುದು ಗೊತ್ತಾಗಿದೆ. ನಂತರ ಆತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಯಿತು. ಆತ ನೀಡಿದ ಮಾಹಿತಿ ಆಧರಿಸಿ, ಕಳವು ವಾಹನಗಳನ್ನು ಮಾರಾಟ ಮಾಡುವ ಸಲುವಾಗಿ ಸಿಂಗಯ್ಯನ ಪಾಳ್ಯ ರಸ್ತೆ ಪಕ್ಕದ ಖಾಲಿ ಜಾಗ ಹಾಗೂ ಡೀಸೆಲ್ ಶೆಡ್ ಪಕ್ಕದ ಖಾಲಿ ಜಾಗದಲ್ಲಿ ನಿಲ್ಲಿಸಿದ್ದ 12 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ. ಆರೋಪಿಗಳ ಬಂಧನದಿಂದ ಮಹದೇವಪುರ ಠಾಣೆ 6, ಎಚ್‌ಎಸ್‌ಆರ್ ಲೇಔಟ್ ಠಾಣೆ 3, ವೈಟ್‌ಫೀಲ್ಡ್ ಠಾಣೆ 2, ಎಚ್‌ಎಎಲ್ ಠಾಣೆ 1, ಆನೇಕಲ್ ಠಾಣೆ 1, ವರ್ತೂರು, ಗೋವಿಂದಪುರ, ಕುಮಾರಸ್ವಾಮಿ ಲೇಔಟ್, ಜೆ.ಪಿ.ನಗರ, ಆವಲಹಳ್ಳಿ, ಬಾಗಲೂರು, ಮಾರತ್‌ಹಳ್ಳಿ ಠಾಣೆಯಲ್ಲಿ ತಲಾ 1 ಹಾಗೂ ಮೈಸೂರು ನಗರ ಠಾಣೆ 1 ಪ್ರಕರಣ ಸೇರಿ 22 ದ್ವಿಚಕ್ರ ವಾಹನ ಕಳವು ಪ್ರಕರಣ ಪತ್ತೆಯಾಗಿದೆ. ಉಳಿದ ಮೂರು ವಾಹನಗಳ ಮಾಲೀಕರ ಪತ್ತೆ ಕಾರ್ಯ ಮುಂದುವರಿದಿದೆ ಎಂದು ಪೊಲೀಸರು ಹೇಳಿದ್ದಾರೆ.

ವಿಲ್ಲಾ ಮೇಳಕ್ಕೆ ಉತ್ತಮ ಸ್ಪಂದನೆ

ಬೆಂಗಳೂರು: ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಡಾ. ಪುನೀತ್ ರಾಜ್ ಕುಮಾರ್ ವಸತಿ ಸಂಕೀರ್ಣದಲ್ಲಿ (ಹುಣ್ಣಿಗೆರೆ) ಆಯೋಜಿಸಿದ್ದರ ವಿಲ್ಲಾ ಮೇಳಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ದೊರೆತಿದೆ. ವಿವಿಧ ಅಳತೆಯ 4 ಬಿಎಚ್‌ಕೆಯ 121, 3 ಬಿಎಚ್‌ಕೆಯ 118 ವಿಲ್ಲಾಗಳು ಮತ್ತು 1 ಬಿಎಚ್‌ಕೆಯ 320 ಫ್ಲ್ಯಾಟ್‌ಗಳನ್ನು ಸಾರ್ವಜನಿಕರಿಗೆ ಹಂಚಿಕೆ ಮಾಡಲು ಮೇಳ ಆಯೋಜಿಸಲಾಗಿತ್ತು. ಸುಮಾರು 400ಕ್ಕೂ ಹೆಚ್ಚು ಸಾರ್ವಜನಿಕರು ಭಾಗವಹಿಸಿದ್ದು, ಇದರಲ್ಲಿ ಸುಮಾರು 130 ಮಂದಿ ವಿಲ್ಲಾದ ಪ್ರಾರಂಭಿಕ ಠೇವಣಿಯನ್ನು ಸ್ಥಳದಲ್ಲಿಯೇ ಪಾವತಿಸಿದರು. ಈ ಪೈಕಿ 70 ಮಂದಿಗೆ ಹಂಚಿಕೆ ಪತ್ರ ನೀಡಲಾಯಿತು. ಉಳಿದವರಿಗೆ ಮುಂದಿನ ದಿನಗಳಲ್ಲಿ ಹಂಚಿಕೆ ಪತ್ರವನ್ನು ನೀಡಲಾಗುವುದು ಎಂದು ಬಿಡಿಎ ಅಧಿಕಾರಿಗಳು ತಿಳಿಸಿದ್ದಾರೆ. ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಸೌತ್ ಇಂಡಿಯನ್ ಬ್ಯಾಂಕ್, ಆಕ್ಸಿಸ್ ಬ್ಯಾಂಕ್, ಕೆನರಾ ಬ್ಯಾಂಕ್, ಬ್ಯಾಂಕ್ ಆಫ್ ಬರೋಡಾ, ಎಚ್‌ಡಿಎಫ್‌ಸಿ ಬ್ಯಾಂಕ್ ಮತ್ತು ಪಂಜಾಬ್ ನ್ಯಾಷನಲ್ ಬ್ಯಾಂಕ್ ಪ್ರತಿನಿಧಿಗಳು ಹಾಜರಿದ್ದರು. ಬಿಡಿಎ ಆರ್ಥಿಕ ಸದಸ್ಯ ಎ.ಲೋಕೇಶ್, ಎಂಜಿನಿಯರ್ ಮಲ್ಲಿಕಾರ್ಜುನ ಸ್ವಾಮಿ, ಮುಖ್ಯ ಲೆಕ್ಕಾಧಿಕಾರಿ ಶ್ರೀನಿವಾಸಮೂರ್ತಿ, ಉಪ ಕಾರ್ಯದರ್ಶಿ ಕೃಷ್ಣಮೂರ್ತಿ ಭಾಗವಹಿಸಿದ್ದರು.

₹ 8.5 ಕೋಟಿ ಮೌಲ್ಯದ ಮಾದಕ ವಸ್ತು ಜಪ್ತಿ

ಬೆಂಗಳೂರು: ಫುಡ್ ಕಿಟ್‌ನಲ್ಲಿಟ್ಟು ಸಾಗಿಸುತ್ತಿದ್ದ 8.5 ಕೋಟಿ ರು. ಮೌಲ್ಯದ ಡ್ರಗ್ಸ್ ಅನ್ನು ಡಿಆರ್‌ಐ ಅಧಿಕಾರಿ ಗಳು ವಶಪಡಿಸಿಕೊಂಡ ಘಟನೆ ಬೆಳಕಿಗೆ ಬಂದಿದೆ. ದೆಹಲಿಯಿಂದ ಬೆಂಗಳೂರಿಗೆ ಬಂದಿದ್ದ ನೈಜೀರಿಯಾ ಯುವತಿ ಮಕ್ಕಳ ಆಹಾರದ ಕಿಟ್‌ನಲ್ಲಿ ಡ್ರಗ್ಸ್ ಮಾರಾಟ ಮಾಡಲು ಯತ್ನಿಸಿದ್ದಳು. ಯುವತಿಯಿಂದ 4.5 ಕೆಜಿಯ 8.5 ಕೋಟಿ ರು. ಮೌಲ್ಯದ ಡ್ರಗ್ಸ್ ಅನ್ನು ಡಿಆರ್‌ಐ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ. ನೈಜೀರಿಯಾ ಯುವತಿಯನ್ನು ಬಂಧಿಸಿದ ಡಿಆರ್‌ಐ 14 ದಿನ ಕಸ್ಟಡಿಗೆ ಪಡೆದಿದೆ.

VISHWAVANI TV SPECIAL
ಯುಟ್ಯೂಬ್ ಚಾನೆಲ್ ಸಬ್‌ಸ್ಕ್ರೈಬ್ ಆಗಿ

ನಿಯಮ ಬಾಹಿರವಾಗಿ ಕ್ಲೋಸಿಂಗ್ ಟೆಂಡರ್ ನಡೆಸುತ್ತಿರುವ ಬಗ್ಗೆ ಆರೋಪ

ಕೆಟಿಪಿಪಿ ಕಾಯಿದೆಗೆ ತಿಲಾಂಜಲಿ?

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಸರಕಾರದ 35 ಇಲಾಖೆಗಳಲ್ಲಿ ಹಾಗೂ ಸರಕಾರದ ಅಧೀನದ ನಿಗಮ, ಮಂಡಳಿ ಸೇರಿ ವಿವಿಧ ಸಂಸ್ಥೆಗಳಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿನ ಪಾರದರ್ಶಕತೆ (ಕೆಟಿಪಿಪಿ) ಕಾಯಿದೆ ಪಾಲನೆಯಾಗುತ್ತಿಲ್ಲ. ಅಧಿಕಾರಿಗಳು ತಮಗಿಷ್ಟವಾದ ಕಂಪನಿಗಳಿಗೆ ಟೆಂಡರ್ ನೀಡುವುದಕ್ಕಾಗಿ ನಿಯಮ ಬಾಹಿರವಾಗಿ ಕ್ಲೋಸಿಂಗ್ ಟೆಂಡರ್ ನಡೆಸುತ್ತಿರುವ ಬಗ್ಗೆ ಗಂಭೀರ ಆರೋಪಗಳಿವೆ.

ಟೆಂಡರ್ ಪ್ರಕ್ರಿಯೆ ಸೇರಿ ಕಾಮಗಾರಿಗಳ ಬಿಲ್‌ಗಳ ಪಾವತಿ ವಿಚಾರದಲ್ಲಿಯೂ ಅಧಿಕಾರಿಗಳು, ತಮ್ಮದೇ ಸೂತ್ರ ಅಳವಡಿಸಿಕೊಂಡಿರುವ ಬಗ್ಗೆ ದೂರುಗಳಿವೆ. ಕೆಟಿಪಿಪಿ ಕಾಯಿದೆ 1999ರಲ್ಲಿ ರೂಪಿಸಲಾಗಿತ್ತು. 2000ರ ಅಕ್ಟೋಬರ್‌ನಲ್ಲಿ ಅಧಿಕೃತವಾಗಿ ಜಾರಿಗೆ ತರಲಾಯಿತು. ಲೋಕೋಪಯೋಗಿ, ಜಲ ಸಂಪನ್ಮೂಲ, ಇಂಧನ, ಕೃಷಿ, ವೈದ್ಯಕೀಯ, ಸಣ್ಣ ನೀರಾವರಿ, ಆರೋಗ್ಯ, ವಸತಿ ಸೇರಿ ಸರಕಾರದ ಬಹುತೇಕ ಇಲಾಖೆಗಳಲ್ಲಿ ಹಾಗೂ ಇಲಾಖೆಗಳ ಅಧೀನದ ಮಂಡಳಿ, ನಿಗಮ, ಸಾರ್ವಜನಿಕ ವಲಯದ ಉದ್ಯಮ, ವಿಶ್ವ ವಿದ್ಯಾಲಯದ, ಸಹಕಾರ ಸಂಸ್ಥೆಗಳಲ್ಲಿ ಕೆಟಿಪಿಪಿ ನಿಯಮ ಪಾಲನೆ ಕಡ್ಡಾಯವಾಗಿದೆ.

ಉಕ್ಕಿನ ನಿರ್ಮಾಣ, ಕಟ್ಟಡ, ರಸ್ತೆಗಳು, ಸೇತುವೆ ಸೇರಿ ವಿವಿಧ ಬಗೆಯ ನಿರ್ಮಾಣ ಹಂತದ ಕಾಮಗಾರಿಗಳು, ಯಂತ್ರೋಪಕರಣಗಳು, ಸಲಕರಣೆಗಳು, ಪೀಠೋಪಕರಣಗಳು, ಲೇಖನ ಸಾಮಗ್ರಿಗಳು, ಜವಳಿ ಕಚ್ಚಾ ಸಾಮಗ್ರಿಗಳು, ಔಷಧ, ರಾಸಾಯನಿಕಗಳು ಹಾಗೂ ಆಹಾರ ಧಾನ್ಯಗಳ ಖರೀದಿಗೆ ಇಲಾಖೆಗಳು ಕೆಟಿಪಿಪಿ ಪ್ರಕಾರ ಟೆಂಡರ್ ನಡೆಸಿ ಫೈನಾನ್ಸಿಯಲ್ ಬಿಡ್‌ನಲ್ಲಿ ಕಡಿಮೆ ಬಿಡ್ ಮಾಡಿ ಎಲ್-1 ಪಡೆದ ಕಂಪನಿಗೆ ಕಾರ್ಯಾದೇಶ ಪತ್ರ ನೀಡಲಾಗುತ್ತದೆ.

ಅಲ್ಲದೆ, ಟೆಂಡರ್ ದಸ್ತಾವೇಜು ಪರಿಶೀಲನೆಗೆ, ಮೌಲ್ಯಮಾಪನ ಮತ್ತು ಅಂಗೀಕರಿಸಲು ಟೆಂಡರ್ ಪರಿಶೀಲನಾ ಸಮಿತಿ ರಚಿಸಲಾಗುತ್ತದೆ.

ಈ ಸಮಿತಿಯು ಟೆಂಡರ್ ಪ್ರಕ್ರಿಯೆ ಬಗ್ಗೆ ಮೇಲ್ವಿಚಾರಣೆ ನಡೆಸುತ್ತದೆ. 2 ಕೋಟಿ ರು.ವರೆಗಿನ ಮೌಲ್ಯದ ಟೆಂಡರ್‌ಗೆ 30 ದಿನ, 2 ಕೋಟಿ ರು.ಗಿಂತ ಅಧಿಕ ಮೌಲ್ಯದ ಟೆಂಡರ್‌ಗಳಿಗೆ 60 ದಿನ ಕಾಲಾವಕಾಶ ನೀಡಲಾಗುತ್ತದೆ. ಆದರೆ, ಬಹು ತೇಕ ಇಲಾಖೆಗಳಲ್ಲಿ ಹಾಗೂ ವಿವಿಧ ನಿಗಮ ಮಂಡಳಿಗಳಲ್ಲಿ ಅಧಿಕಾರಿಗಳು ಕೆಟಿಪಿಪಿ ಬದಲು ಇ-ಪೋರ್ಟಲ್‌ನಲ್ಲಿ ಟೆಂಡರ್ ನಡೆಸುವ ಬದಲು ಕ್ಲೋಸಿಂಗ್, ಕೋಟೇಷನ್ ಮೂಲಕ ಟೆಂಡರ್ ನಡೆಸಲಾಗುತ್ತದೆ.

ಬಿಲ್ ಪಾವತಿಗೆ ಸಿಂಡಿಕೇಟ್ ರಚನೆ: ಬಹುತೇಕ ಇಲಾಖೆಗಳಲ್ಲಿ ಹೊಸ ಬಿಲ್‌ಗಳಿಗೆ ಹಣ ಪಾವತಿಸಲು ಕೆಲ ಬಲಾಢ್ಯರು ಸಿಂಡಿಕೇಟ್ ರಚಿಸಿಕೊಂಡಿದ್ದಾರೆ. ಸಚಿವರ ಹೆಸರು ಹೇಳಿಕೊಂಡು ಟೆಂಡರ್ ಪಡೆಯುವುದು, ಹೊಸ ಬಿಲ್‌ಗಳಿಗೆ ಹಣ ಬಿಡುಗಡೆ ಮಾಡಿಕೊಳ್ಳುತ್ತಿರುವ ದಂಧೆ ಎಲ್ಲ ಇಲಾಖೆಗಳಲ್ಲೂ ನಡೆಯುತ್ತಿದೆ. ಕೆಟಿಪಿಪಿ ನಿಯಮದಂತೆ ಬಾಕಿ ಉಳಿದಿರುವ ಕಾಮಗಾರಿಗಳ ಬಿಲ್‌ಗಳಿಗೆ ಹಣ ಬಿಡುಗಡೆ ಮಾಡಬೇಕು. ಆದರೆ, ನಿಯಮ ಉಲ್ಲಂಘಿಸಿ ಅಧಿಕಾರಿಗಳು, ಹಳೆಯ ಬಿಲ್‌ಗಳ ಬದಲು ಹೊಸ ಬಿಲ್‌ಗಳಿಗೆ ಹಣ ಬಿಡುಗಡೆ ಮಾಡುತ್ತಿದ್ದಾರೆ. ಇದರಿಂದಾಗಿ ಸಣ್ಣ, ಮಧ್ಯಮ ಗುತ್ತಿಗೆದಾರರು ಕಂಗಾಲಾಗಿದ್ದಾರೆ.

ಕೆಟಿಪಿಪಿನಿಂದ ಅನುಕೂಲವೇನು?

- ಓಪನ್ ಟೆಂಡರ್‌ನಿಂದ ಪಾರದರ್ಶಕತೆಗೆ ಅವಕಾಶ
- ಎಷ್ಟು ಕಂಪನಿಗಳು ಬಿಡ್ ಸಲ್ಲಿಕೆ ಬಗ್ಗೆ ಗೊತ್ತಾಗುತ್ತದೆ
- ದಾಖಲೆಗಳು, ಎಷ್ಟು ಮೊತ್ತ ನಮೂದಿಸಿವೆ ಬಗ್ಗೆ ತಿಳಿಯಲಿದೆ
- ನಕಲಿ ದಾಖಲೆ ಸಲ್ಲಿಸಿದರೆ ಪತ್ತೆ
- ಆರೋಗ್ಯಕರ ಸ್ಪರ್ಧೆ ಇರಲಿದೆ
- ನಿಗದಿಗಿಂತ ಹೆಚ್ಚು ಮೊತ್ತ ನಮೂದಿಸಲು ಆಗಲ್ಲ
- ಸಾಮರ್ಥ್ಯ ಆಧಾರದಲ್ಲಿ ಕಡಿಮೆ ಬಿಡ್ ಮಾಡಿದವರಿಗೆ ಟೆಂಡರ್

ಭ್ರಷ್ಟಾಚಾರಕ್ಕೆ ರಹದಾರಿ

ಕೆಟಿಪಿಪಿ ಬದಲು ಕ್ಲೋಸಿಂಗ್ ಟೆಂಡರ್ ನಡೆಸಿದರೆ ಪಾರದರ್ಶಕತೆ ಇರುವುದಿಲ್ಲ. ಭ್ರಷ್ಟಾಚಾರಕ್ಕೆ ಎಡೆ ಮಾಡಿಕೊಳ್ಳಲಾಗುತ್ತದೆ. ಕಂಪನಿಗಳು ನಕಲಿ ಪ್ರಮಾಣಪತ್ರ ಸಲ್ಲಿಸಿ ನಿಗದಿಗಿಂತ ಅಧಿಕ ಮೊತ್ತ ನಮೂದಿಸಿ ಟೆಂಡರ್ ಪಡೆಯುತ್ತೇವೆ. ಯಾವ ಕಂಪನಿಗಳು ಏನೇನು ದಾಖಲೆಗಳನ್ನು ಸಲ್ಲಿಸಿರುವ ಬಗ್ಗೆ ಗೊತ್ತಾಗುವುದಿಲ್ಲ. ನಿಗದಿತ ಪ್ರಮಾಣಗಿಂತ ಹೆಚ್ಚು ಮೊತ್ತ ನಮೂದಿಸಿ ಸರಕಾರದ ಬೊಕ್ಕಸಕ್ಕೆ ಕೋಟ್ಯಂತರ ನಷ್ಟ ಉಂಟು ಮಾಡುತ್ತಾರೆ. ಅಲ್ಲದೆ, ತುರ್ತು ಪರಿಸ್ಥಿತಿಯಲ್ಲಿ ಅತಿ ಅವಶ್ಯಕತೆ ಇದ್ದಾಗ, ಸತತವಾಗಿ ಟೆಂಡರ್ ವಿಳಂಬವಾದರೆ ಮಾತ್ರವೇ ಕೊಟೇಷನ್ ಮೂಲಕ 1 ಲಕ್ಷ ರು. ಒಳಗಿನ ಟೆಂಡರ್ ಖರೀದಿಸಲು ಅವಕಾಶ ಇದೆ. ಟೆಂಡರ್ ಮೌಲ್ಯ ಒಂದು ಲಕ್ಷ ರೂ. ದಾಟಿದರೆ ಕೆಟಿಪಿಪಿ ಕಾಯಿದೆಯಂತೆ ಆನ್‌ಲೈನ್‌ನಲ್ಲಿ ಟೆಂಡರ್ ನಡೆಸಿ ಅತಿ ಕಡಿಮೆ ಮೊತ್ತಕ್ಕೆ ಬಿಡ್ ಸಲ್ಲಿಸಿದವರಿಗೆ ಕಾರ್ಯಾದೇಶ ಪತ್ರ ನೀಡಬೇಕು. ಆದರೆ, ಅಧಿಕಾರಿಗಳು ಕಮಿಷನ್ ಪಡೆದು ನಿರ್ದಿಷ್ಟ ಕಂಪನಿಗೆ ಅನುಕೂಲ ಮಾಡಿಕೊಳ್ಳಲು ಟೆಂಡರ್ ಷರತ್ತುಗಳನ್ನೇ ಬದಲಾಯಿಸುತ್ತಿದ್ದಾರೆ.

ಜಾತಿಗಣತಿ ವೇಳೆ ಮಾದಿಗರ ಪಾತ್ರವೇನು? ಕಾರ್ಯಕ್ರಮದಲ್ಲಿ ಎಚ್.ಆಂಜನೇಯ

ಮಾದಿಗರ ಸಂಖ್ಯೆ ಹೆಚ್ಚು, ಎಕೆ, ಎಡಿ, ಎಎ ಹೆಸರಿನಿಂದ ಗೊಂದಲ

ಬೆಂಗಳೂರು: ರಾಜ್ಯದಲ್ಲಿ ಪರಿಶಿಷ್ಟ ಜಾತಿಯ ಕೆಲವು ಸಮುದಾಯವರು ತಾವು ಹೆಚ್ಚಿನ ಸಂಖ್ಯೆಯಲ್ಲಿದ್ದೇವೆ ಎಂದು ಹೇಳುತ್ತಿದ್ದಾರೆ. ಆದರೆ, ವಾಸ್ತವವಾಗಿ ಮಾದಿಗರ ಸಂಖ್ಯೆ ಹೆಚ್ಚಿದ್ದು, ಆದಿಕರ್ನಾಟಕ (ಎಕೆ), ಆದಿದ್ರಾವಿಡ (ಎಡಿ), ಆದಿಆಂಧ್ರ (ಎಎ) ಹೆಸರಿನಲ್ಲಿ ಗುರುತಿಸಿಕೊಂಡಿರುವುದು ಗೊಂದಲಕ್ಕೆ ಕಾರಣವಾಗಿದೆ ಎಂದು ಮಾಜಿ ಸಚಿವರೂ ಆಗಿರುವ ಕೆಪಿಸಿಸಿ ಉಪಾಧ್ಯಕ್ಷ ಎಚ್.ಆಂಜನೇಯ ಹೇಳಿದರು.

ಅಂಬೇಡ್ಕರ್ ಭವನದಲ್ಲಿ ಮಾದಿಗ ಒಳ ಮೀಸಲಾತಿ ಹೋರಾಟ ಸಮಿತಿಯು ಭಾನುವಾರ ಆಯೋಜಿಸಿದ್ದ 'ಜಾತಿ ಜನ ಗಣತಿ ವೇಳೆ ಮಾದಿಗರ ಪಾತ್ರವೇನು?' ಕಾರ್ಯಕ್ರಮದಲ್ಲಿ ಮಾತನಾಡಿ, ಆಂಧ್ರದಲ್ಲಿ ಮಂದಕೃಷ್ಣ ಆರಂಭಿಸಿದ ಮಾದಿಗ ಒಳಮೀಸಲಾತಿ ಹೋರಾಟ ಕರ್ನಾಟಕದಲ್ಲಿಯೂ ಕಿಚ್ಚು ಹಚ್ಚಿತು ಎಂದರು.

ತೆಲಂಗಾಣ ಸೇರಿ ಕೆಲವೆಡೆ ಒಳಮೀಸಲಾತಿ ಜಾರಿಗೆ ಅಲ್ಲಿನ ಸರಕಾರಗಳು ಕ್ರಮ ಕೈಗೊಂಡಿವೆ. ಕರ್ನಾಟಕದಲ್ಲಿಯೂ ಒಳ ಮೀಸಲಾತಿ ಜಾರಿಗೊಳಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ದಿಟ್ಟ ಕ್ರಮ ಕೈಗೊಂಡಿದ್ದಾರೆ. ಒಳ ಮೀಸಲಾತಿ ಜಾರಿಗೆ ಬರುವವರೆಗೆ ಸರಕಾರಿ ಉದ್ಯೋಗಗಳ ನೇಮಕಾತಿಗೆ ಸರಕಾರ ತಡೆ ನೀಡಿದೆ ಎಂದರು. ಪರಿಶಿಷ್ಟ ಕುಟುಂಬಗಳ ದತ್ತಾಂಶ ಸಂಗ್ರಹಕ್ಕೆ ಮೇ 5ರಿಂದ 17ರವರೆಗೆ ಜಾತಿ ಜನಗಣತಿ ನಡೆಯಲಿದೆ. ಈ ಅವಧಿಯಲ್ಲಿ ಮಾದಿಗ ಸಮುದಾಯದವರು ಅತ್ಯಂತ ಜವಾಬ್ದಾರಿಯಿಂದ ವರ್ತಿಸಬೇಕು. ಮಾದಿಗ ಸಮುದಾಯ ಜಾತಿ, ಉತ್ಸವ, ಹಬ್ಬ, ಜಯಂತಿಗಳ ಆಚರಣೆಯಲ್ಲಿ ಮುಳುಗುವ ಮುಗ್ಧ ಸಮುದಾಯ. ಇಂತಹ ಆಚರಣೆಗಳನ್ನು ಜಾತಿ ಜನಗಣತಿ ಮುಗಿಯುವವರೆಗೂ ಆಚರಿಸಬಾರದು. ನಮ್ಮ ಗುರಿ ಜಾತಿ ಜನಗಣತಿಯತ್ತ ಇರಬೇಕು ಎಂದು ಮನವಿ ಮಾಡಿದರು.

ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಶಾಸಕ ಬಸವಂತಪ್ಪ ಮತ್ತು ಮಾದಿಗ ಸಮುದಾಯದ ಮುಖಂಡರು ಇದ್ದರು.

> ಆಂಧ್ರದಲ್ಲಿ ಮಾದಿಗ ಸಮುದಾಯ ಆಯೋಜಿಸಿದ್ದ ಒಳಮೀಸಲಾತಿ ಹೋರಾಟದಲ್ಲಿ ಸಚಿವ ಸ್ಥಾನ ಪಣಕ್ಕಿಟ್ಟು ಈ ಹಿಂದೆ ನಾನು ಭಾಗವಹಿಸಿದ್ದೆ. ನನಗೆ ಮಾದಿಗ ಸಮುದಾಯದ ಪ್ರಗತಿ ಮುಖ್ಯ. ರಾಜ್ಯದಲ್ಲಿ ಒಳಮೀಸಲಾತಿ ಹಂಚಿಕೆ ವೇಳೆ ಮಾದಿಗ ಸಮುದಾಯಕ್ಕೆ ಹೆಚ್ಚು ಪಾಲು ದೊರೆಯಲೇಬೇಕು. ಅದಕ್ಕೆ ಸಮುದಾಯದ ಎಲ್ಲರೂ ಬಹಳ ಎಚ್ಚರಿಕೆ ಹೆಜ್ಜೆ ಇಡಬೇಕು.
>
> -**ಎಚ್.ಆಂಜನೇಯ**, ಮಾಜಿ ಸಚಿವ

'ಜಾತಿಗಣತಿ ವೇಳೆ ಮಾದಿಗರ ಪಾತ್ರವೇನು?' ಕಾರ್ಯಕ್ರಮದಲ್ಲಿ ಎಚ್.ಆಂಜನೇಯ, ಬಿ.ಎನ್.ಚಂದ್ರಪ್ಪ, ಮಾದಿಗ ಸಮುದಾಯದ ಮುಖಂಡರು ಪ್ರತಿಜ್ಞೆ ಸ್ವೀಕರಿಸಿದರು.

ಬೆಂಗಳೂರಲ್ಲಿ 435 ಮಂದಿಗೆ ಡೆಂಘೀ

ಬೆಂಗಳೂರು: ರಾಜಧಾನಿ ಬೆಂಗಳೂರಿನಲ್ಲಿ ಕಳೆದ ಮೂರುವರೇ ತಿಂಗಳಲ್ಲಿ 2,361 ಡೆಂಘೀ ಶಂಕಿತರ ರಕ್ತದ ಮಾದರಿಗಳನ್ನು ಪರೀಕ್ಷಿಸಲಾಗಿದ್ದು, ಅವರಲ್ಲಿ 435 ಮಂದಿಯಲ್ಲಿ ಡೆಂಘೀ ದೃಢಪಟ್ಟಿದೆ.

ರಾಜಧಾನಿ ಬೆಂಗಳೂರು ಸೇರಿದ್ದಂತೆ ರಾಜ್ಯದಲ್ಲಿ ಡೆಂಘೀ ಪ್ರಕರಣ ಹೆಚ್ಚಳವಾಗಿವೆ. ಪೂರ್ವ ಮುಂಗಾರು ಮಳೆ ಎಫೆಕ್ಟ್ ಬೇಸಿಗೆಯಲ್ಲಿಯೇ ಡೆಂಘೀ ಪ್ರಕರಣ ಹೆಚ್ಚಳ ಕಂಡು ಬರುತ್ತಿವೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ಗರಿಷ್ಠ ಪ್ರಕರಣಗಳು ವರದಿಯಾಗಿದ್ದು, 2,361 ಡೆಂಘಿ ಶಂಕಿತರ ರಕ್ತದ ಮಾದರಿ ಪರೀಕ್ಷಿಸಲಾಗಿದ್ದು, ಈ ಪೈಕಿ ನಗರದಲ್ಲಿ 435 ಮಂದಿಯಲ್ಲಿ ಡೆಂಘೀ ದೃಢಪಟ್ಟಿದೆ.

ಪ್ರತಿ ವರ್ಷ ಮುಂಗಾರು ಮಳೆ ಕಾಣಿಸಿಕೊಂಡ ಬಳಿಕ ಈ ಜ್ವರ ಹೆಚ್ಚಿನವರನ್ನು ಬಾಧಿಸುತ್ತಿತ್ತು. ಆದರೆ ಈಗ ಬೇಸಿಗೆಯಲ್ಲಿಯೇ ಸೊಳ್ಳೆ ಕಾಟದಿಂದ ಡೆಂಘಿ ಜ್ವರ ಹೆಚ್ಚಳವಾಗಿದೆ. ಕಳೆದ ವರ್ಷ ಡೆಂಘೀ ಪ್ರಕರಣ 32 ಸಾವಿರದ ಗಡಿ ದಾಟಿತ್ತು. ಈ ವರ್ಷ ಏಪ್ರಿಲ್‌ನಲ್ಲಿ ಸುರಿದ ಮಳೆಯಿಂದಾಗಿ ಮುಂಗಾರು ಪೂರ್ವದಲ್ಲಿಯೇ ಡೆಂಘೀ ಪ್ರಕರಣಗಳು ಹೆಚ್ಚಳವಾಗುವ ಸಾಧ್ಯತೆಯಿದ್ದು, ಆರೋಗ್ಯ ಇಲಾಖೆ ಅಲರ್ಟ್ ಆಗಿದೆ. ಬೆಂಗಳೂರು ನಗರ ಸೇರಿದ್ದಂತೆ ರಾಜ್ಯದ ಎಲ್ಲ ಆಸ್ಪತ್ರೆಗಳಿಗೂ ಡೆಂಘೀ ನಿಯಂತ್ರಣದ ಬಗ್ಗೆ ಮುನ್ನೆಚ್ಚರಿಕೆಗಳ ಬಗ್ಗೆ ಸೂಚನೆ ನೀಡಿದೆ.

ರಾಜಧಾನಿಯಲ್ಲಿ ಮಳೆ ಪ್ರವೇಶದ ಜತೆ ಸೈಲೆಂಟ್ ಡೆಂಘಿ ಕಂಡು ಬರುತ್ತಿದ್ದು, ಅಕಾಲಿಕ ಮಳೆ ಹಿನ್ನೆಲೆ ಮತ್ತೆ ಡೆಂಘೀ ಆರ್ಭಟಿಸುವ ಆತಂಕ ಶುರುವಾಗಿದೆ. ಈಗಾಗಲೇ ಜ್ವರ, ವೈರಲ್ ಫೀವರ್ ಎಂದು ಜನ ಆಸ್ಪತ್ರೆಯತ್ತ ಮುಖ ಮಾಡಿದ್ದಾರೆ. ತಪಾಸಣೆ ನಡುವೆ ಜನರಲ್ಲಿ ಡೆಂಘಿ ಲಕ್ಷಣಗಳು ಕಂಡು ಬರುತ್ತಿವೆ. ಜನರಿಗೆ ಆರೋಗ್ಯದ ಬಗ್ಗೆ ನಿಗಾವಹಿಸುವಂತೆ ಸೂಚನೆ ನೀಡಲಾಗಿದೆ.

ಮಾಜಿ ಸಚಿವ ಬಿ.ಬಿ.ಚಿಮ್ಮನಕಟ್ಟಿ ಅವರ ನಿವಾಸಕ್ಕೆ ಡಿಸಿಎಂ ಡಿ.ಕೆ.ಶಿವಕುಮಾರ್ ಶನಿವಾರ ಭೇಟಿ ನೀಡಿ ಆರೋಗ್ಯ ಕ್ಷೇಮ ವಿಚಾರಿಸಿ, ಧೈರ್ಯ ತುಂಬಿದರು. ಚಿಮ್ಮನಕಟ್ಟಿ ಪುತ್ರ ಭೀಮಸೇನ ಚಿಮ್ಮನಕಟ್ಟಿ ಉಪಸ್ಥಿತರಿದ್ದರು.

ಪ್ರೊಫೆಸರ್ ಮೇಲೆ ಹಲ್ಲೆ: ಮೂವರ ಸೆರೆ

ಬೆಂಗಳೂರು: ಚಲಿಸುತ್ತಿದ್ದ ಆಟೋ ರಿಕ್ಷಾದೊಳಗೆ ಕುಳಿತು ಕಸ ಎಸೆದಿದ್ದನ್ನು ಪ್ರಶ್ನಿಸಿದ್ದ ಪ್ರೊಫೆಸರ್ ಮೇಲೆ ಹಲ್ಲೆಗೈದಿದ್ದ ಮೂವರು ಆರೋಪಿಗಳನ್ನು ಕುಮಾರ ಸ್ವಾಮಿ ಲೇಔಟ್ ಪೊಲೀಸರು ಬಂಧಿಸಿದ್ದಾರೆ.

ಭಾನುಪ್ರಸಾದ್ (26), ಶರತ್ (23) ಹಾಗೂ ಅಮೃತ್ ಕುಮಾರ್ (24) ಬಂಧಿತರು. ದಯಾನಂದ ಸಾಗರ್ ಕಾಲೇಜ್‌ನ ಪ್ರೊಫೆಸರ್ ಅರಬಿಂದೋ ಗುಪ್ತಾ ಎಂಬುವವರ ಮೇಲೆ ಹಲ್ಲೆಗೈದಿದ್ದ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದರು.

ಏಪ್ರಿಲ್ 21ರಂದು ಕುಮಾರಸ್ವಾಮಿ ಲೇಔಟ್ ಠಾಣೆ ವ್ಯಾಪ್ತಿಯ ಜೆಎಚ್‌ಬಿಸಿಎಸ್ ಲೇಔಟ್‌ನಲ್ಲಿ ಘಟನೆ ನಡೆದಿತ್ತು. ಆಟೋ ರಿಕ್ಷಾದೊಳಗೆ ಕುಳಿತಿದ್ದ ಆರೋಪಿಗಳು ಕಸ, ಗ್ಲಾಸ್‌ಗಳನ್ನು ರಸ್ತೆಗೆ ಎಸೆಯುತ್ತಿದ್ದರು. ಈ ಸಂದರ್ಭದಲ್ಲಿ ಬೈಕ್‌ನಲ್ಲಿ ಸಾಗುತ್ತಿದ್ದ ಅರಬಿಂದೋ ಗುಪ್ತಾ, ಈ ರೀತಿ ಕಸ ಎಸೆಯಬೇಡಿ, ಇತರೆ ವಾಹನಗಳು ಸ್ಕಿಡ್ ಆಗುವ ಸಾಧ್ಯತೆಯಿರುತ್ತದೆ ಎಂದು ಆರೋಪಿಗಳಿಗೆ ಸೂಚಿಸಿದ್ದರು. ಅಷ್ಟಕ್ಕೆ ಸಿಟ್ಟಿಗೆದ್ದ ಆರೋಪಿಗಳು ಆಟೋದಿಂದ ಇಳಿದು ಅರಬಿಂದೋ ಗುಪ್ತಾ ಅವರ ಮೇಲೆ ಹಲ್ಲೆಗೈದಿದ್ದರು.

ತಪ್ಪನ್ನು ಪ್ರಶ್ನಿಸಿದ್ದಕ್ಕೆ ಮೂವರು ತಮ್ಮ ಮೇಲೆ ಹಲ್ಲೆ ಮಾಡಿದ್ದಾರೆ. 20-30 ವರ್ಷಗಳ ಹಿಂದೆ ಸುರಕ್ಷಿತ ನಗರ ಎಂದು ಬೆಂಗಳೂರನ್ನು ಕರೆಯಲಾಗುತ್ತಿತ್ತು. ಆದರೆ ಇಂದು ಬೆಂಗಳೂರಿನ ಹೆಸರನ್ನು ಹಾಳು ಮಾಡಲಾಗುತ್ತಿದೆ. ಈ ರೀತಿಯ ಗೂಂಡಾವರ್ತನೆ ಸಹಿಸಲು ಸಾಧ್ಯವಿಲ್ಲ ಎಂದು ಅರಬಿಂದೋ ಗುಪ್ತಾ ಅವರು ವೀಡಿಯೋ ಮಾಡಿ ಘಟನೆ ವಿವರಿಸಿದ್ದರು. ಘಟನೆ ಸಂಬಂಧ ಅರಬಿಂದೋ ಗುಪ್ತಾ ಅವರು ನೀಡಿದ ದೂರಿನನ್ವಯ ಕುಮಾರ ಸ್ವಾಮಿ ಲೇಔಟ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಬಳಿಕ ಘಟನಾ ಸ್ಥಳದ ಸುತ್ತಮುತ್ತಲಿನ ಸಿಸಿಟಿವಿ ದೃಶ್ಯಗಳ ಪರಿಶೀಲನೆ ನಡೆಸಿದ್ದ ಪೊಲೀಸರು, ಆರೋಪಿಗಳನ್ನು ಪತ್ತೆ ಹಚ್ಚಿ ಬಂಧಿಸಿರುವುದಾಗಿ ತಿಳಿಸಿದ್ದಾರೆ.

ಜಾತಿ ಜನಗಣತಿ ವರದಿ ಒಪ್ಪಲು ಸಾಧ್ಯವಿಲ್ಲ

ಬೆಂಗಳೂರು: ಜಾತಿ ಜನಗಣತಿ ವರದಿ ವೈಜ್ಞಾನಿಕವಾಗಿಲ್ಲ ಮತ್ತು ಅದನ್ನು ನಾವು ಒಪ್ಪಿಕೊಳ್ಳುವುದಿಲ್ಲ ಎಂದು ಈ ಹಿಂದೆಯೇ ಸ್ಪಷ್ಟಪಡಿಸಿದ್ದೇವೆ. ನಮ್ಮ ಈ ನಿಲುವಿನಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷರೂ ಆಗಿರುವ ಕಾಂಗ್ರೆಸ್ ಶಾಸಕ ಶಾಮನೂರು ಶಿವಶಂಕರಪ್ಪ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿ, ಇದು ಅತ್ಯಂತ ಹಳೆಯ ವರದಿ. ಅದು ವೈಜ್ಞಾನಿಕವಾಗಿ ಆಗಿಲ್ಲ. ಅವರಿಗೆ ಹೇಗೆ ಬೇಕೋ, ಹಾಗೆ ಬರೆಸಿಕೊಂಡಿದ್ದಾರೆ. ಈ ವರದಿಯನ್ನು ಸರಿಪಡಿಸಿಕೊಂಡೇ ಸರಕಾರ ಮುಂದಿನ ಕ್ರಮ ತೆಗೆದುಕೊಳ್ಳಬೇಕು. ಈ ವರದಿ ಕುರಿತಂತೆ ಲಿಂಗಾಯತ ಮತ್ತು ಒಕ್ಕಲಿಗ ನಾಯಕರು ಈಚೆಗಷ್ಟೇ ಸಭೆ ನಡೆಸಿದ್ದೇವೆ. ಮತ್ತೆ ಸಭೆ ಸೇರುತ್ತೇವೆ ಎಂದರು.

ಕ್ಯಾಬ್ ಚಾಲಕನ ಕತ್ತು ಕೊಯ್ದು ಭೀಕರ ಕೊಲೆ

ಬೆಂಗಳೂರು: ಕ್ಯಾಬ್ ಚಾಲಕರೊಬ್ಬರನ್ನು ದುಷ್ಕರ್ಮಿಗಳು ಅಪಹರಿಸಿಕೊಂಡು ಹೋಗಿ ಕತ್ತು ಕೊಯ್ದು ಬರ್ಬರವಾಗಿ ಹತ್ಯೆಗೈದಿರುವ ಘಟನೆ ಸಾತನೂರು ಪೊಲೀಸ್ ಠಾಣಾ ವ್ಯಾಪ್ತಿಯ ಕಬ್ಬಾಳು ಸಮೀಪದ ಅರೆಕಟ್ಟೆದೊಡ್ಡಿ ಬಳಿ ನಡೆದಿದೆ.

ನಗರದ ಸೋಲದೇವನಹಳ್ಳಿ ಠಾಣಾ ವ್ಯಾಪ್ತಿಯ ಚಿಕ್ಕಬ್ಯಾಲಕೆರೆ ನಿವಾಸಿ ಚಂದ್ರಶೇಖರ (39) ಕೊಲೆಯಾದ ಕ್ಯಾಬ್ ಚಾಲಕ. ಇವರು ನಗರದಲ್ಲಿ ಕ್ಯಾಬ್ ಚಾಲಕ ವೃತ್ತಿ ಮಾಡಿಕೊಂಡು ಜೀವನ ನಿರ್ವಹಿಸುತ್ತಿದ್ದು, ಶನಿವಾರ ದುಷ್ಕರ್ಮಿಗಳು ಇವರನ್ನು ವಾಹನವೊಂದರಲ್ಲಿ ನಗರದಿಂದ ಅಪಹರಿಸಿಕೊಂಡು ಹೋಗಿ ಕಬ್ಬಾಳು ಸಮೀಪದ ಖಾಸಗಿ ಶಾಲೆಗೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಚಾಕುವಿನಿಂದ ಕತ್ತು ಕೊಯ್ದು ನಂತರ ತಲೆಯ ಮೇಲೆ ಕಲ್ಲು ಎತ್ತಿ ಹಾಕಿ ಬರ್ಭರವಾಗಿ ಹತ್ಯೆಗೈದು ಪರಾರಿಯಾಗಿದ್ದಾರೆ.

ರಸ್ತೆಯಲ್ಲಿ ಬಿದ್ದಿದ್ದ ಶವವನ್ನು ಗಮನಿಸಿದ ಸ್ಥಳೀಯರು ಸಾತನೂರು ಪೊಲೀಸ್ ಠಾಣೆಗೆ ಮಾಹಿತಿ ನೀಡಿದರು. ಸುದ್ದಿ ತಿಳಿದು ಸ್ಥಳಕ್ಕೆ ಧಾವಿಸಿದ ಪೊಲೀಸರು ಪರಿಶೀಲನೆ ನಡೆಸಿದರು. ಆದರೆ ಕೊಲೆಯಾದ ವ್ಯಕ್ತಿಯ ಗುರುತು ಪತ್ತೆಯಾಗಿರಲಿಲ್ಲ. ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡ ಪೊಲೀಸರಿಗೆ ಕೊಲೆಯಾದ ವ್ಯಕ್ತಿ ಸೋಲದೇವನಹಳ್ಳಿ ಠಾಣಾ ವ್ಯಾಪ್ತಿಯ ಚಿಕ್ಕಬ್ಯಾಲಕೆರೆ ನಿವಾಸಿ ಎಂದು ಗೊತ್ತಾಗಿದೆ. ಸೋಲದೇವನಹಳ್ಳಿ ಠಾಣಾ ವ್ಯಾಪ್ತಿಯಲ್ಲಿ ಅಪಹರಣ ಪ್ರಕರಣ ದಾಖಲಾಗಿದೆ.

ವೈಯಕ್ತಿಕ ದ್ವೇಷಕ್ಕಾಗಿ ಕೊಲೆ ನಡೆಯಿತೋ ಅಥವಾ ಮಹಿಳೆಯ ವಿಚಾರದಲ್ಲಿ ಕೊಲೆ ನಡೆದಿದೆಯೋ ಎಂಬ ಬಗ್ಗೆ ಪೊಲೀಸರ ತನಿಖೆ ಕೈಗೊಂಡು ದುಷ್ಕರ್ಮಿಗಳ ಪತ್ತೆಗೆ ಬಲೆ ಬೀಸಿದ್ದಾರೆ.

ಅಲ್ಪಸಂಖ್ಯಾತರ ವಸತಿ ಶಾಲೆಗಳ ಪ್ರವೇಶಕ್ಕೆ ನೂಕುನುಗ್ಗಲು

ಬೆಂಗಳೂರು: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಾದರಿಯ ವಸತಿ ಶಾಲೆಗಳ ಪ್ರವೇಶಕ್ಕೆ ನಾ ಮುಂದು ತಾ ಮುಂದು ಎಂಬಂತೆ ನೂಕುನುಗ್ಗಲು ಉಂಟಾಗಿದೆ ಎಂದು ಅಲ್ಪಸಂಖ್ಯಾತರ ನಿರ್ದೇಶನಾಲಯ ನಿರ್ದೇಶಕ ಜಿಲಾನಿ.ಎಚ್.ಮೊಕಾಶಿ ತಿಳಿಸಿದ್ದಾರೆ.

ಈ ಕುರಿತ ಪ್ರಕಟಣೆಯಲ್ಲಿ ತಿಳಿಸಿರುವ ಅವರು, ವಿವಿಧ ಮಾದರಿಯ ವಸತಿ ಶಾಲೆ ಗಳಾದ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಮುಸ್ಲಿಂ ವಸತಿ ಶಾಲೆಗಳ 6ನೇ ತರಗತಿ ದಾಖಲಾತಿಗಾಗಿ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿತ್ತು.

ಇಲಾಖೆ ಅಡಿಯಲ್ಲಿ 134 ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಪ್ರಸಕ್ತ ಸಾಲಿನಲ್ಲಿ 11,330 ಸೀಟುಗಳಿಗೆ ಬರೋಬ್ಬರಿ 56,424 ಅರ್ಜಿ ಸ್ವೀಕರಿಸಲಾಗಿದೆ. ಆಯ್ಕೆ ಪ್ರಕ್ರಿಯೆಗಾಗಿ ರಾಜ್ಯಾದ್ಯಂತ 145 ಪರೀಕ್ಷಾ ಕೇಂದ್ರಗಳನ್ನು ಗುರುತಿಸಿ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸಲಾಗಿದ್ದು, 41 ಸಾವಿರ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ ಶೇ.73ರಷ್ಟು ಹಾಜರಾತಿ ಸಾಧಿಸಲಾಗಿದೆ.

ಇದರಿಂದಾಗಿ ರಾಜ್ಯದ ಅಲ್ಪಸಂಖ್ಯಾತರ ವಸತಿ ಶಾಲೆಗಳ ಪ್ರವೇಶಕ್ಕೆ ಫುಲ್ ಡಿಮ್ಯಾಂಡ್ ಸೃಷ್ಟಿಯಾಗಿ ತೀವ್ರ ಸ್ಪರ್ಧೆ ಏರ್ಪಟ್ಟಿದೆ ಎಂದು ತಿಳಿಸಿದ್ದಾರೆ.

ವಸತಿ ಶಾಲೆಗಳ ವಿಶೇಷತೆ

ಅಲ್ಪಸಂಖ್ಯಾತರ ವಸತಿ ಶಾಲೆಗಳಲ್ಲಿ ಗುಣಮಟ್ಟದ ಭೋದಕ ಸಿಬ್ಬಂದಿ, ಉತ್ಕೃಷ್ಟಮಟ್ಟದ ಮೂಲಭೂತ ಸೌಕರ್ಯಗಳು, ವಿದ್ಯಾರ್ಥಿಗಳಿಗೆ 6 ರಿಂದ 12ನೇ ತರಗತಿ ವರೆಗೆ ಉಚಿತ ಮತ್ತು ವಸತಿಯುತ ಶಿಕ್ಷಣ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹೆಸರಾಂತ ತರಬೇತಿ ಕೇಂದ್ರಗಳಿಂದ ತರಬೇತಿ ಮುಂತಾದ ವಿಭಿನ್ನ ಮಾದರಿಯ ಕಲಿಕಾ ಸಾಮರ್ಥ್ಯ ಮತ್ತು ರಾಷ್ಟ್ರೀಯ ಮೌಲ್ಯಗಳನ್ನು ಅನುಷ್ಠಾನಗೊಳಿ ಸಲಾಗುತ್ತಿದೆ.

ಸದರಿ ಶಾಲೆಗಳಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಶೇ.94 ರಷ್ಟಿದ್ದು, ಸಿಬಿಎಸ್‌ಇ ಶಾಲೆಗಳ ಫಲಿತಾಂಶ ಶೇ.98 ರಷ್ಟು ಆಗಿದೆ. ದ್ವಿತೀಯ ಪಿಯು ಫಲಿತಾಂಶವೂ ಸಹ ಈ ಬಾರಿ ಶೇ.90 ರಷ್ಟಿದ್ದು, ಇದು ಶಾಲೆಗಳ ಮೇಲೆ ಪೋಷಕರಲ್ಲಿ ಧನಾತ್ಮಕ ಭಾವ ಉಂಟು ಮಾಡಿದೆ ಎಂದು ಮೊಕಾಶಿ ಅಭಿಪ್ರಾಯ ಪಟ್ಟರು.

ಪಾರದರ್ಶಕತೆಗೆ ಒತ್ತು

ವಸತಿ ಶಾಲೆಗಳ ಪ್ರವೇಶಕ್ಕಾಗಿ ಸೇವಾ ಸಿಂಧು ಪೋರ್ಟಲ್ ಮುಖಾಂತರ ಅರ್ಜಿ ಆಹ್ವಾನಿಸಲಾಗಿತ್ತು. ಅಲ್ಪಸಂಖ್ಯಾತರ ನಿರ್ದೇಶನಾಲಯದ ವತಿಯಿಂದ ಇದೇ ಮೊದಲ ಬಾರಿಗೆ ಒಎಂಆರ್ ಉತ್ತರ ಪತ್ರಿಕೆ ಪರಿಚಯಿಸಲಾಗಿದ್ದು, ವಿದ್ಯಾರ್ಥಿಗಳು ಉತ್ತರ ಬರೆದ ನಂತರ ನಕಲು ಪ್ರತಿಯನ್ನು ತಮ್ಮ ಬಳಿ ಕೊಂಡೊಯ್ಯಬಹುದಾಗಿದೆ. ಇದರಿಂದಾಗಿ ಪಾರದರ್ಶಕತೆಗೆ ಹೆಚ್ಚಿನ ಒತ್ತು ನೀಡಲಾ ಗಿದೆ. ಸಂಪೂರ್ಣ ಆನ್‌ಲೈನ್‌ನಲ್ಲಿಯೇ ಪ್ರವೇಶ ಪತ್ರ ವಿತರಣೆ, ನಾಮಿನಲ್ ರೋಲ್ ನಿರ್ವಹಣೆ, ಮತ್ತು ಫಲಿತಾಂಶ ಪ್ರಕಟಣೆ ಸೇರಿದಂತೆ ಸಂಪೂರ್ಣ ದಾಖಲಾತಿ ಪ್ರಕ್ರಿಯೆ ಪೂರ್ಣ ಗೊಳಿಸಲಾಗುವುದು ಎಂದು ಮೊಕಾಶಿ ತಿಳಿಸಿದ್ದಾರೆ.

ಅನುಬಂಧ IV-ಎ

ಸ್ಥಿರಾಸ್ತಿಗಳ ಮಾರಾಟಕ್ಕಾಗಿ ಮಾರಾಟದ ಸೂಚನೆ

ಸೆಕ್ಯುರಿಟಿ ಇಂಟರೆಸ್ಟ್ (ಎನ್‌ಫೋರ್ಸ್‌ಮೆಂಟ್) ನಿಯಮಗಳು, 2002ರ ನಿಯಮ 8(6) ಮತ್ತು ನಿಯಮ 9(1)ರ ನಿಬಂಧನೆಗೊಂದಿಗೆ ಓದಲಾಗುವ ಸೆಕ್ಯುರೈಟೇಶನ್ ಆ್ಯಂಡ್ ರಿಕನ್‌ಸ್ಟ್ರಕ್ಷನ್ ಆಫ್ ಫೈನಾನ್ಷಿಯಲ್ ಅಸೆಟ್ಸ್ ಆ್ಯಂಡ್ ಎನ್‌ಫೋರ್ಸ್‌ಮೆಂಟ್ ಆಫ್ ಸೆಕ್ಯುರಿಟಿ ಇಂಟರೆಸ್ಟ್ ಕಾಯ್ದೆ, 2002ರಡಿಯಲ್ಲಿ ಸ್ಥಿರಾಸ್ತಿಗಳ ಮಾರಾಟದ ಸಲುವಾಗಿ ಇ-ಹರಾಜು ಮಾರಾಟ ಸೂಚನೆ.

ಈ ಮೂಲಕ ಸಾರ್ವಜನಿಕರಿಗೆ ಮತ್ತು ಮುಖ್ಯವಾಗಿ ಸಾಲಗಾರರು (ಗಳು) ಮತ್ತು ಗ್ಯಾರಂಟರ (ಗಳು) ರಿಗೆ ಸೂಚನೆ ನೀಡುವುದೇನೆಂದರೆ, **ಸಮ್ಮಾನ್ ಕ್ಯಾಪಿಟಲ್ ಲಿಮಿಟೆಡ್ (ಹಿಂದೆ ಇಂಡಿಯಾಬುಲ್ಸ್ ಹೌಸಿಂಗ್ ಫೈನಾನ್ಸ್ ಲಿಮಿಟೆಡ್ ಎಂದು ಕರೆಯಲಾಗುತ್ತಿತ್ತು) (CIN : L65922DL2005PLC136029) (''ಸೆಕ್ಯೂರ್ಡ್ ಕ್ರೆಡಿಟರ್'')** ಇವರಿಗೆ ಮಾರ್ಟ್‌ಗೇಜ್ ಮಾಡಲಾದ ಈ ಕೆಳಗೆ ವಿವರಿಸಲಾದ ಸ್ಥಿರಾಸ್ತಿ(ಗಳು)ಯ **ಭೌತಿಕ ಸ್ವಾಧೀನತೆಯನ್ನು** ಸೆಕ್ಯೂರ್ಡ್ ಕ್ರೆಡಿಟರರ ಅಧಿಕೃತ ಅಧಿಕಾರಿಯವರು ಪಡೆದುಕೊಂಡಿದ್ದು, ಸೆಕ್ಯೂರ್ಡ್ ಕ್ರೆಡಿಟರರಿಗೆ **ಶಿವಶಂಕರಪ್ಪ ಜಿ ಮತ್ತು ಮಹಾಲಕ್ಷ್ಮಿ ಸಿ ವಿ** ಇವರಿಂದ **ಸಾಲ ಖಾತೆ ನಂ. HHLTUM00408272** ಇದರಲ್ಲಿನ ಅಸಲು, ಹಿಂದಿನ ಬಾಕಿ (ಸಂಚಯಿತ ವಿಳಂಬ ಶುಲ್ಕವನ್ನೊಳಗೊಂಡು) ಮತ್ತು **21.04.2025**ರ ತನಕದ ಬಡ್ಡಿ **ರೂ. 10,26,285/- (ರೂಪಾಯಿ ಹತ್ತು ಲಕ್ಷ ಇಪ್ಪತ್ತ ಆರು ಸಾವಿರದ ಇನ್ನೂರ ಎಂಬತ್ತ ಐದು ಮಾತ್ರ)** ಸಾಲ ಒಪ್ಪಂದ ಮತ್ತು ಇತರ ಸಂಬಂಧಿತ ದಸ್ತಾವೇಜಿ(ಗಳು)ನಂತೆ ಕಾನೂನು ಸಂಬಂಧಿತ ವೆಚ್ಚಗಳು ಮತ್ತು ಸೆಕ್ಯೂರ್ಡ್ ಕ್ರೆಡಿಟರರಿಗೆ ಬರ ಬೇಕಾದ ಇತರ ಶುಲ್ಕಗಳೊಂದಿಗೆ **22.04.2025**ರಿಂದ ಭವಿಷ್ಯದ ಬಡ್ಡಿಯ ವಸೂಲಿಗಾಗಿ **''ಎಲ್ಲಿದೆಯೊ ಹಾಗೆ'', ''ಏನಿದೆಯೊ ಹಾಗೆ''** ಮತ್ತು **''ಯಾವುದೇ ರಿಕೋರ್ಸ್ ಇಲ್ಲದ''** ಆಧಾರದಲ್ಲಿ ತಾರೀಖು **15.05.2025**ರಂದು **ಸಂಜೆ 05.00 ರಿಂದ ಸಂಜೆ 06.00 ರವರೆಗೆರ** ತನಕ ಮಾರಾಟ ಮಾಡಲಿದ್ದಾರೆ.

ಸ್ಥಿರಾಸ್ತಿ(ಗಳ)ಯ ರಿಸರ್ವ್ ಬೆಲೆ **ರೂ. 5,50,000/- (ರೂಪಾಯಿ ಐದು ಲಕ್ಷ ಐವತ್ತು ಸಾವಿರ ಮಾತ್ರ)** ಆಗಿದೆ ಮತ್ತು ಅರ್ನೆಸ್ಟ್ ಮನಿ ಡಿಪಾಸಿಟ್ **(''ಇಎಮ್‌ಡಿ'') ರೂ. 55,000/- (ರೂಪಾಯಿ ಐವತ್ತ ಐದು ಸಾವಿರ ಮಾತ್ರ)** ಅಂದರೆ, ರಿಸರ್ವ್ ಬೆಲೆಯ 10%ಕ್ಕೆ ಸಮನಾಗಿದೆ.

ಸ್ಥಿರಾಸ್ತಿ(ಗಳ) ವಿವರಣೆ

ಆಸ್ತಿ ಹೊಂದಿರುವ ಸಂ. 68, **ವಾರ್ಡ್ ನಂ.** 1, **ಮರಲೇನಹಳ್ಳಿ, ತುಮಕೂರು, ಕರ್ನಾಟಕ**- 572106.

ಮಾರಾಟದ ವಿವರವಾದ ನಿಯಮಗಳು ಮತ್ತು ಷರತ್ತುಗಳಿಗಾಗಿ, ದಯವಿಟ್ಟು ಸುರಕ್ಷಿತ ಸಾಲಗಾರರ ವೆಬ್‌ಸೈಟ್‌ನಲ್ಲಿ ಒದಗಿಸಲಾದ ಲಿಂಕ್ ಅನ್ನು ಉಲ್ಲೇಖಿಸಿ ಅಂದರೆ www.sammaancapital.com; ಸಂಪರ್ಕ ಸಂಖ್ಯೆ : 0124-6910910, +91 7065451024; ಇ-ಮೇಲ್ ಐಡಿ : auctionhelpline@sammaancapital.com. ಬಿಡ್ಡಿಂಗ್‌ಗಾಗಿ, www.auctionfocus.in ಗೆ ಲಾಗಿನ್ ಮಾಡಿ.

ಸಹಿ
ಅಧಿಕಾರಯುಕ್ತ ಅಧಿಕಾರಿ
ಸಮ್ಮಾನ್ ಕ್ಯಾಪಿಟಲ್ ಲಿಮಿಟೆಡ್
(ಹಿಂದೆ ಇಂಡಿಯಾಬುಲ್ಸ್ ಹೌಸಿಂಗ್ ಫೈನಾನ್ಸ್ ಲಿಮಿಟೆಡ್ ಎಂದು ಕರೆಯಲಾಗುತ್ತಿತ್ತು)

ದಿನಾಂಕ : 22.04.2025
ಸ್ಥಳ : ತುಮಕೂರು

ನಗರದ ಕೇಂದ್ರಭಾಗ ಮೆಜೆಸ್ಟಿಕ್‌ನಲ್ಲಿ ಹೆಚ್ಚಿದ ಕಳ್ಳರ ಕೈಚಳಕ

3 ಲ್ಯಾಪ್‌ಟಾಪ್ ಎಗರಿಸಿದ ಖದೀಮರು

ಬೆಂಗಳೂರು: ಮೆಜೆಸಿಕ್‌ನಲ್ಲಿ ಕಳ್ಳರ ಕೈಚಳಕ ಹೆಚ್ಚಾಗಿದ್ದು, ಮೂವರ ಲ್ಯಾಪ್‌ಟಾಪ್ ಎಗರಿಸಿದ ಪ್ರಕರಣ ಬೆಳಕಿಗೆ ಬಂದಿದೆ.

ಏಪ್ರಿಲ್.12, 16 ಮತ್ತು 18 ರಂದು ಕ್ರಮವಾಗಿ ಟರ್ಮಿನಲ್ 1,2, ಮತ್ತು 3ರಲ್ಲಿ ಕಳ್ಳರು ಕೈಚಳಕ ತೋರಿಸಿದ್ದು, ಮೂವರ ಲ್ಯಾಪ್ ಟಾಪ್ ಗಳನ್ನು ಕಳ್ಳತನ ಮಾಡಿದ್ದಾರೆ. ಈ ಸಂಬಂಧ ಉಪ್ಪಾರಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಜೆಪಿ ನಗರದಲ್ಲಿ ವಾಸವಿರುವ ಬಿ.ಟೆಕ್ ವಿದ್ಯಾರ್ಥಿ ಅಜನ್ (21) ಏಪ್ರಿಲ್ 12 ರಂದು ಆಂಧ್ರಪ್ರದೇಶಕ್ಕೆ ಪ್ರಯಾಣಿಸುತ್ತಿ ದ್ದರು. ನೀರು ಖರೀದಿಸಲು ಟರ್ಮಿನಲ್ 3 ರಲ್ಲಿ ಬಸ್ ಇಳಿದ ನಂತರ 60 ಸಾವಿರ ರು. ಮೌಲ್ಯದ ಅವರ ಲ್ಯಾಪ್‌ಟಾಪ್ ಕಳ್ಳತನವಾಗಿದೆ. ಅಜನ್ ಅವರು ತಮ್ಮ ಲ್ಯಾಪ್‌ಟಾಪ್ ಅನ್ನು ಸೀಟಿನ ಮೇಲಿನ ಲಗೇಜ್ ವಿಭಾಗದಲ್ಲಿ ಇರಿಸಿದ್ದರು. ಮತ್ತೆ ಬಸ್ ಹತ್ತಿದ ನಂತರ, ಮೊದಲ ಸೀಟಿನಲ್ಲಿ ಕುಳಿತಿದ್ದ ವ್ಯಕ್ತಿಯೊಬ್ಬರು ಲ್ಯಾಪ್‌ಟಾಪ್ ತೆಗೆದುಕೊಂಡು ಪರಾರಿಯಾಗಿದ್ದಾರೆ ಎಂದು ಇತರ ಪ್ರಯಾಣಿಕರು ಮಾಹಿತಿ ನೀಡಿದ್ದಾರೆ.

ಆರೋಪಿ ಬಸ್ ಹತ್ತಿದ್ದನ್ನು ನಾನು ಗಮನಿಸಿದ್ದೆ. ವ್ಯಕ್ತಿ ಚೆನ್ನಾಗಿ ಬಟ್ಟೆ ಧರಿಸಿ ದ್ದರು. ಇಪ್ಪತ್ತು ವಯಸ್ಸಿನ ಯುವಕ ಹಾಗೂ ಖಾಸಗಿ ಸಂಸ್ಥೆಯ ಉದ್ಯೋಗಿ ಎಂಬಂತೆ ಕಾಣಿಸುತ್ತಿದ್ದ ಎಂದು ಅಜನ್ ಅವರು ಹೇಳಿದ್ದಾರೆ. ಚಿಕ್ಕಮಗಳೂರಿಗೆ ಪ್ರಯಾಣಿಸುತ್ತಿದ್ದ 26 ವರ್ಷದ ವೈದ್ಯಕೀಯ ಪ್ರತಿನಿಧಿ ಅನುಷಾ ಎಂಬುವವರ ಲ್ಯಾಪ್ ಟಾಪ್ ಕೂಡ ಕಳ್ಳತವಾಗಿದೆ. ರಾತ್ರಿ 10 ರಿಂದ 10.30 ರ ನಡುವೆ ಘಟನೆ ನಡೆದಿದೆ. ಟರ್ಮಿನಲ್ 2 ರಲ್ಲಿ ಲಗೇಜ್ ಅನ್ನು ಹೊರತೆಗೆಯು ವಾಗ 50 ಸಾವಿರ ರು. ಮೌಲ್ಯದ ಲ್ಯಾಪ್‌ಟಾಪ್ ಕಳ್ಳತನ ವಾಗಿದೆ. ಇದರ ಜತೆಗೆ ಬ್ಯಾಗ್ ನಲ್ಲಿದ್ದ ಪ್ಯಾನ್ ಕಾರ್ಡ್ ಹಾಗೂ ಎಲೆಕ್ಷನ್ ಐಡಿ ಹಾಗೂ ಇತರೆ ದಾಖಲೆಗಳೂ ನಾಪತ್ತೆಯಾಗಿದೆ ಎಂದು ಹೇಳಿಕೊಂಡಿದ್ದಾರೆ.

ಮತ್ತೊಂದು ಘಟನೆಯಲ್ಲಿ ದಾವಣ ಗೆರೆಯ ವೈದ್ಯಕೀಯ ಪ್ರತಿನಿಧಿ ಮಂಜು ನಾಥ್ (36) ಅವರು ರಾತ್ರಿ 11.30 ರಿಂದ 11.40 ರ ನಡುವೆ ಟರ್ಮಿನಲ್ 1 ರಲ್ಲಿ ಸ್ನೇಹಿತನೊಂದಿಗೆ ಬಸ್‌ಗಾಗಿ ಕಾಯುತ್ತಿದ್ದಾಗ 25,000 ರು. ಮೌಲ್ಯದ ಲ್ಯಾಪ್‌ಟಾಪ್ ಅನ್ನು ಕಳೆದು ಕೊಂಡಿ ದ್ದಾರೆ. ಮೂರು ಪ್ರಕರಣಗಳು ನಮ್ಮ ಗಮನಕ್ಕೆ ಬಂದಿದ್ದು, ಆರೋಪಿ ಪತ್ತೆಗೆ ಸುತ್ತಮುತ್ತಲಿನ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಲಾಗುತ್ತಿದೆ. ಆರೋಪಿ ವೃತ್ತಿಪರನಂತೆ ತೋರುತ್ತಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ಹೇಳಿದ್ದಾರೆ.

ಕೊಳೆಗೇರಿ ನಿವಾಸಿಗಳಿಗಾಗಿ ಉಚಿತ ಸಂಚಾರಿ ಚಿಕಿತ್ಸಾಲಯ

ಬೆಂಗಳೂರು: ರಾಷ್ಟ್ರೋತ್ಥಾನ ಆಸ್ಪತ್ರೆಯ ಉಚಿತ ಸಂಚಾರಿ ಚಿಕಿತ್ಸಾಲಯದ 2ನೇ ವಾಹನಕ್ಕೆ ಅಂಬೇಡ್ಕರ್ ನಗರದ ಕೊಳೆಗೇರಿ ಪ್ರದೇಶದಲ್ಲಿ ಚಾಲನೆ ನೀಡಲಾಯಿತು.

ಈ ವಾಹನಕ್ಕೆ ರಾಷ್ಟ್ರೋತ್ಥಾನ ಪರಿಷತ್‌ನ ಅಧ್ಯಕ್ಷ ಎಂ.ಪಿ.ಕುಮಾರ್, ಉದ್ಯಮಿ ಡಾ.ಮೋಹನ್ ಮಂಗಾನಿ, ಡಾ. ಕರ್ನಲ್ ಆನಂದ ಶಂಕರ್ ಚಾಲನೆ ನೀಡಿದರು. ಮೊದಲ ಸಂಚಾರಿ ಚಿಕಿತ್ಸಾಲಯದ ವಾಹನದಿಂದ 15 ಸಾವಿರ ಕೊಳೆಗೇರಿ ನಿವಾಸಿಗಳು ಪ್ರಯೋಜನ ಪಡೆದುಕೊಂಡಿದ್ದಾರೆ.

ಈ ವೇಳೆ ಮಾತನಾಡಿದ ಎಂ.ಪಿ.ಕುವರ್, ರಾಷ್ಟ್ರೋತ್ಥಾನ ಪರಿಷತ್‌ನ ಮೂಲ ಧ್ಯೇಯವೇ ಸೇವೆ. ಸಮಾಜದಲ್ಲಿನ ಎಲ್ಲವರ್ಗದವರೂ ಸಮಾನತೆ, ಸಾಮರಸ್ಯಗಳೊಂದಿಗೆ ಪರಸ್ಪರ ಸಹಕಾರದಿಂದ ಬದುಕಬೇಕು ಹಾಗೂ ಶಿಕ್ಷಣ, ಆರೋಗ್ಯ, ಸೇವೆ ಪ್ರತಿಯೊಬ್ಬರಿಗೂ ದೊರಕಬೇಕು. ರಾಷ್ಟ್ರೋತ್ಥಾನವು ನಿರಂತರ ಸೇವೆ ಸಲ್ಲಿಸುತ್ತಿದ್ದು, ಆಸ್ಪತ್ರೆಯ ನುರಿತ ವೈದ್ಯರು ನೇರವಾಗಿ ಜನರ ಮನೆಯ ಬಾಗಿಲಿಗೆ ತೆರಳಿ ಉಚಿತ ಆರೋಗ್ಯ ಸೇವೆ ನೀಡುತ್ತಿದ್ದಾರೆ ಎಂದರು.

ಡಾ. ಮೋಹನ್ ಮಂಗಾನಿ ಮಾತನಾಡಿ, ರಾಷ್ಟ್ರೋತ್ಥಾನ ಸಂಸ್ಥೆಯು ಶಿಕ್ಷಣ, ಆರೋಗ್ಯ, ಸ್ವಾವಲಂಬನೆ ಕ್ಷೇತ್ರಗಳಲ್ಲಿದೊಡ್ಡಮಟ್ಟದ ಕೆಲಸ ಮಾಡುತ್ತಿದೆ. ರಾಷ್ಟ್ರೋತ್ಥಾನ ಆಸ್ಪತ್ರೆಯಲ್ಲಿಆಧುನಿಕ ಉಪಕರಣಗಳ ಮೂಲಕ ಸಮಾಜದ ಎಲ್ಲವರ್ಗದವರಿಗೂ ಅನುಕೂಲವಾಗುವಂತಹ ಆರೋಗ್ಯ ಸೇವೆ ನೀಡುತ್ತಿದೆ ಎಂದು ಹೇಳಿದರು. ಈ ಚಿಕಿತ್ಸಾಲಯಗಳ ಮೂಲಕ ವಾರ್ಷಿಕ 15 ಲಕ್ಷ ಕಾರ್ಮಿಕರಿಗೆ ಚಿಕಿತ್ಸೆ ನೀಡುವ ಗುರಿ ಇದೆ ಎಂದು ಈ ಹಿಂದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಹೇಳಿದರು.

ಸಮಾಚಾರ ಸಣ್ಣದಲ್ಲ

ಯುಎಲ್‌ಐಪಿ ಪಿಂಚಣಿ ಯೋಜನೆ ಜಾರಿ

ಬೆಂಗಳೂರು: ನಿವೃತ್ತಿ ಆದ ಮೇಲೆ ಯಾರ ಮೇಲೂ ಆರ್ಥಿಕವಾಗಿ ಅವಲಂಬಿತರಾಗದೆ ಸ್ವತಂತ್ರವಾಗಿ ಜೀವನ ಸಾಗಿಸಲು ಯುಎಲ್‌ಐಪಿ ಪಿಂಚಣಿ ಯೋಜನೆ ಪರಿಚಯಿಸಲಾಗಿದೆ. ಪೆನ್ಷನ್ ಯುಎಲ್‌ಐಪಿಗಳು ಮಾರುಕಟ್ಟೆಗೆ ಸಂಬಂಧಿಸಿದ ಲಾಭವನ್ನು ಒದಗಿಸುವ ಅನನ್ಯ ಅವಕಾಶ ನೀಡುತ್ತಿದ್ದು, ಇವುಗಳು ನಿವೃತ್ತಿ ಯೋಜನೆಗೆ ಉತ್ತಮ ಆಯ್ಕೆಯಾಗಿದೆ. ಸಾಂಪ್ರದಾಯಿಕ ಪಿಂಚಣಿ ಯೋಜನೆಗಳು ನಿಗದಿತ ಲಾಭ ಮಾತ್ರ ನೀಡುತ್ತವೆ. ಆದರೆ ಪಿಂಚಣಿ ಯುಎಲ್‌ಐಪಿಗಳು ಹೂಡಿಕೆದಾರರಿಗೆ ತಮ್ಮ ಹೂಡಿಕೆಯ ಶೇ.100ರಷ್ಟನ್ನು ಷೇರು ಮಾರುಕಟ್ಟೆಯಲ್ಲಿ (ಈಕ್ವಿಟಿ) ಹೂಡಿಕೆ ಮಾಡಲು ಅವಕಾಶ ನೀಡುತ್ತವೆ. ಇದರಿಂದ ಬೆಳವಣಿಗೆ ಹೊಂದುವ ಸಾಮರ್ಥ್ಯ ಜಾಸ್ತಿ ಮಾಡುತ್ತವೆ. ಈ ಈಕ್ವಿಟಿ ಹೂಡಿಕೆಯು ಕಾಲಾಂತರದಲ್ಲಿ ದೊಡ್ಡ ಮಟ್ಟದ ನಿವೃತ್ತಿ ನಿಧಿ ನಿರ್ಮಿಸಲು ಸಹಾಯ ಮಾಡುತ್ತದೆ. ಜೊತೆಗೆ ನಿವೃತ್ತಿಯ ಸಮಯದಲ್ಲಿ ಹೂಡಿಕೆದಾರರು ತಮ್ಮ ಕೂಡಿಟ್ಟ ನಿಧಿಯ ಶೇ.60ರಷ್ಟನ್ನು ತೆರಿಗೆ-ಮುಕ್ತವಾಗಿ ಹಿಂಪಡೆಯಬಹುದು. ಉಳಿದ ಶೇ.40ರಷ್ಟನ್ನು ವಾರ್ಷಿಕ ಯೋಜನೆಯಲ್ಲಿ ಹೂಡಿಕೆ ಮಾಡಲಾಗುತ್ತದೆ. ಇದು ಜೀವನಪರ್ಯಂತ ಖಾತರಿಯ ಆದಾಯ ಒದಗಿಸುತ್ತದೆ. ಇದರಿಂದ ನಿವೃತ್ತಿ ಸಮಯದಲ್ಲಿ ಆರ್ಥಿಕ ಭದ್ರತೆ ದೊರೆಯುತ್ತದೆ ಎಂದು ಪಾಲಿಸಿ ಬಜಾರ್‌ನ ಸಿಬಿಓ ವಿವೇಕ್ ಜೈನ್ ತಿಳಿಸಿದ್ದಾರೆ.

ಎಕ್ಸ್‌ಪ್ರೆಸ್ ರೈಲುಗಳ ವೇಗ ಹೆಚ್ಚಳ

ಬೆಂಗಳೂರು: ಕೆಎಸ್‌ಆರ್ ಬೆಂಗಳೂರು-ಧಾರವಾಡ ಸಿದ್ಧಗಂಗಾ-ಕೆಎಸ್‌ಆರ್ ಬೆಂಗಳೂರು ಡೈಲಿ ಎಕ್ಸ್‌ಪ್ರೆಸ್, ಚಿಕ್ಕಮಗಳೂರು-ಯಶವಂತಪುರ ಡೈಲಿ ಎಕ್ಸ್‌ಪ್ರೆಸ್ ರೈಲುಗಳ ವೇಗವನ್ನು ಹೆಚ್ಚಿಸಲು ನೈರುತ್ಯ ರೈಲ್ವೆ ನಿರ್ಧರಿಸಿದೆ. ಈ ಬದಲಾವಣೆಯು ಮೇ 1ರಿಂದ ಜಾರಿಗೆ ಬರಲಿದೆ ಎಂದು ನೈರುತ್ಯ ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ. ವೇಳಾಪಟ್ಟಿಯಲ್ಲಿ ಬದಲಾವಣೆ: ಹಾವೇರಿ ಮತ್ತು ಬ್ಯಾಡಗಿ ನಿಲ್ದಾಣಗಳ ನಡುವೆ ರೈಲು ಹಳಿಗಳ ನಿರ್ವಹಣೆ ಮತ್ತು ದುರಸ್ತಿ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಬೆಳಗಾವಿ-ಮೈಸೂರು ವಿಶ್ವಮಾನವ ದೈನಂದಿನ ಎಕ್ಸ್‌ಪ್ರೆಸ್ ರೈಲಿನ ವೇಳಾಪಟ್ಟಿಯಲ್ಲಿ ಬದಲಾವಣೆ ಮಾಡಲಾಗಿದೆ. ಏಪ್ರಿಲ್ 28, 29, ಮೇ 1, 2, 4, 5, 6, 8, 9, 11, 12, 13, 15 ಮತ್ತು 16ರಂದು ಈ ರೈಲು ಬೆಳಗಾವಿಯಿಂದ ನಿಗದಿತ ನಿರ್ಗಮನ ಸಮಯವಾದ 6.15ರ ಬದಲು 7.15ಕ್ಕೆ ಹೊರಡಲಿದೆ. ಈ ದಿನಗಳಲ್ಲಿ ಮಾರ್ಗಮಧ್ಯೆ ರೈಲನ್ನು ಸುಮಾರು 45 ನಿಮಿಷ ನಿಯಂತ್ರಿಸಲಾಗುವುದು ಎಂದು ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ.

ಉಪಜಾತಿ ನಮೂದಿಸಿ

ಬೆಂಗಳೂರು: ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಪ್ರಮಾಣ ಹಂಚಿಕೆಗಾಗಿ ದತ್ತಾಂಶ ಸಂಗ್ರಹಿಸಲು ರಾಜ್ಯದಾದ್ಯಂತ ಮೇ 5ರಿಂದ ಪರಿಶಿಷ್ಟ ಕುಟುಂಬಗಳ ಸಮೀಕ್ಷೆ ನಡೆಯಲಿದ್ದು, ಬಲಗೈ ಸಮುದಾಯಕ್ಕೆ ಸೇರಿದ 37 ಉಪ ಜಾತಿಗೆ ಸೇರಿದವರು ಛಲವಾದಿ/ಚಲವಾದಿ ಎಂದು ನಮೂದಿಸಬೇಕು ಎಂದು ರಾಜ್ಯ ಛಲವಾದಿ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಚಿದರವಳ್ಳಿ ಮಹಾದೇವಸ್ವಾಮಿ ತಿಳಿಸಿದ್ದಾರೆ. ಪರಿಶಿಷ್ಟ ಜಾತಿಯಲ್ಲಿರುವ 101 ಜಾತಿಗಳಿಗೆ ಜನಸಂಖ್ಯೆಗೆ ಅನುಗುಣವಾಗಿ ಒಳ ಮೀಸಲಾತಿ ಪ್ರಮಾಣ ಹಂಚಿಕೆಗಾಗಿ ನಿವೃತ್ತ ನ್ಯಾಯಮೂರ್ತಿ ಎಚ್.ಎನ್.ನಾಗಮೋಹನ್ ದಾಸ್ ಆಯೋಗದ ಶಿಫಾರಸಿನಂತೆ ಸರಕಾರವು ಪರಿಶಿಷ್ಟ ಜಾತಿಗಳ ಸಮೀಕ್ಷೆ ನಡೆಸಲಿದೆ. ಇದು ಜಾತಿ ಸಮೀಕ್ಷೆಯೇ ಹೊರತು ಧರ್ಮ ಸಮೀಕ್ಷೆಯಲ್ಲ. ಹೀಗಾಗಿ, ಪರಿಶಿಷ್ಟ ಜಾತಿಯವರು ತಮ್ಮ ಧರ್ಮದ ವಿಷಯಕ್ಕೆ ಮಹತ್ವ ನೀಡುವ ಅಗತ್ಯವಿಲ್ಲ. ಸಮುದಾಯದ ಕೆಲವು ಕುಟುಂಬಗಳು ಬೌದ್ಧ ಧರ್ಮವನ್ನು ಸ್ವೀಕರಿಸಿವೆ. ಅದು ತಪ್ಪಲ್ಲ. ಆದರೆ, ಈ ಸಮೀಕ್ಷೆಯಲ್ಲಿ ಛಲವಾದಿ/ಚಲವಾದಿ ಎಂದು ನಮೂದಿಸಬೇಕು ಎಂದಿದ್ದಾರೆ.

ಕಸ: ಬಳಕೆದಾರರ ಶುಲ್ಕ ಕೈಬಿಡಲು ಆಗ್ರಹ

ಬೆಂಗಳೂರು: ಘನತ್ಯಾಜ್ಯ ನಿರ್ವಹಣಾ ಬಳಕೆದಾರರ ಶುಲ್ಕವನ್ನು ಕಾನೂನುಬಾಹಿರವಾಗಿ ಜಾರಿ ಮಾಡಲಾಗಿದ್ದು, ಕೂಡಲೇ ಸುತ್ತೋಲೆ ವಾಪಸ್ ಪಡೆಯಬೇಕು ಎಂದು ಬಿಬಿಎಂಪಿಯ ಮಾಜಿ ವಿರೋಧ ಪಕ್ಷದ ನಾಯಕ ಪದ್ಮನಾಭ ರೆಡ್ಡಿ ಆಗ್ರಹಿಸಿದ್ದಾರೆ. ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರಿಗೆ ಪತ್ರ ಬರೆದಿರುವ ಅವರು, ನಗರಾಭಿವೃದ್ಧಿ ಇಲಾಖೆಯ ಪತ್ರದಲ್ಲಿ ಆಡಳಿತಗಾರರು ಸರಕಾರದ ವಿರುದ್ಧ ತೀರ್ಮಾನ ತೆಗೆದುಕೊಂಡಿದ್ದಾರೆ. ಇದು ಕಾನೂನಿನ ಉಲ್ಲಂಘನೆ. ದೇಶದ ಯಾವುದೇ ನಗರದಲ್ಲಿ ಘನತ್ಯಾಜ್ಯ ನಿರ್ವಹಣಾ ಸೆಸ್ ಮತ್ತು ಘನತ್ಯಾಜ್ಯ ಬಳಕೆದಾರರ ಶುಲ್ಕ ಎರಡನ್ನೂ ವಿಧಿಸಿಲ್ಲ. ಈಗಾಗಲೇ ಆಸ್ತಿ ತೆರಿಗೆ ಜತೆಗೆ ಶೇ.26ರಷ್ಟು ಸೆಸ್ ಸಂಗ್ರಹಿಸಲಾಗುತ್ತಿದೆ. ಬಳಕೆದಾರರ ಶುಲ್ಕ ಏಕೆ ಬೇಕು? ಎಂದು ಪ್ರಶ್ನಿಸಿದ್ದಾರೆ.

ನಗರದಲ್ಲಿ ಓಟ ಅಪಾಯಕಾರಿ ಸಂಸದ ತೇಜಸ್ವಿ ಸೂರ್ಯ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಅಂತಾರಾಷ್ಟ್ರೀಯ ಮಟ್ಟದ ಟಿಸಿಎಸ್ 10 ಕಿ.ಮೀ ಓಟದಲ್ಲಿ ಗುಂಡಿಗಳು, ಧೂಳಿನಿಂದ ಕೂಡಿದ ಅಪಾಯಕಾರಿ ಓಟದ ಅನುಭವವಾಗಿದೆ ಎಂದು ಸಂಸದ ತೇಜಸ್ವಿ ಸೂರ್ಯ ಬಿಬಿಎಂಪಿಯ ಕ್ರಮಕ್ಕೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಟಿಸಿಎಸ್ ಸಂಸ್ಥೆ ಏರ್ಪಡಿಸಿದ್ದ 10 ಕಿ ಮೀ ಓಟದಲ್ಲಿ ಜಗತ್ತಿನ ಶ್ರೇಷ್ಠ ಅಥ್ಲೀಟ್‌ಗಳು, ಹಿರಿಯ ನಾಗರಿಕರು, ಸಾಮಾನ್ಯ ನಾಗರಿಕರು ಸೇರಿದಂತೆ ಸುಮಾರು ಮಂದಿ ಭಾಗವಹಿಸಿದ್ದರು. ಆದರೆ, ಅವರೆಲ್ಲರೂ ಸುಂದರ ಓಟದ ಬದಲು ನಗರದಲ್ಲಿರುವ ಸಮಸ್ಯೆಗಳೊಂದಿಗೆ ಓಡಬೇಕಾದ ಅನಿವಾರ್ಯತೆ ಎದುರಾಗಿದೆ ಎಂದಿರುವ ಅವರು, ಈ ಸಂಬಂಧ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಬಿಬಿಎಂಪಿ ಆಯುಕ್ತ ತುಷಾರ್ ಗಿರಿನಾಥ್ ಅವರಿಗೆ ಪತ್ರ ಬರೆದಿದ್ದಾರೆ.

ಟಿಸಿಎಸ್ ವರ್ಲ್ಡ್ 10ಕೆ ಓಟದಂತಹ ಕಾರ್ಯಕ್ರಮಗಳು ಬೆಂಗಳೂರಿನ ಬ್ರ್ಯಾಂಡ್ ಮೌಲ್ಯ ಹೆಚ್ಚಿಸುವುದಕ್ಕೆ ಮತ್ತು ಸಾರ್ವಜನಿಕ ಸಹಭಾಗಿತ್ವ ಉತ್ತೇಜಿಸಲು ತೊಡಗಿಸಿಕೊಂಡಿರುವುದು ಗಮನಾರ್ಹ. ಆದರೆ ನಗರದ ಹೃದಯವಾಗಿರುವ ಸಿಬಿಡಿ ರಸ್ತೆಗಳ ಪರಿಸ್ಥಿತಿ ಶೋಚನೀಯವಾಗಿದ್ದು, ಒಂದು ಸಣ್ಣ ಸುಗಮ ರಸ್ತೆ ಕೂಡ ಇಲ್ಲ. ಎಲ್ಲೆಲ್ಲೂ ಗುಂಡಿಗಳು. ಓಟಗಾರರು ಮುಗ್ಗರಿಸಿದ್ದು ಗಾಯಗೊಂಡಿದ್ದು, ಹಿರಿಯ ನಾಗರಿಕರು ಹೆಜ್ಜೆ ಹಾಕಲು ಹೆದರುವ ಸ್ಥಿತಿ ಉಂಟಾಗಿದೆ. ವೀಲ್‌ಚೇರ್‌ನಲ್ಲಿ ಓಡಿದವರು ಸ್ವಂತ ಶಕ್ತಿಯಿಂದ ಸಾಗಲಾರದೆ, ಅನ್ಯರ ಸಹಾಯ ಪಡೆಯಬೇಕಾದ ಪರಿಸ್ಥಿತಿ ಉಂಟಾಯಿತು. ಇದರ ಜತೆಗೆ ಅನೇಕ ಸ್ಥಳಗಳಲ್ಲಿ ಕಸದ ರಾಶಿಗಳು, ಅನೈರ್ಮಲ್ಯದ ಬದಿಗಳು, ಮುರಿದ ಪಾದಚಾರಿ ಮಾರ್ಗಗಳು ಇವು ಬ್ರ್ಯಾಂಡ್ ಬೆಂಗಳೂರಿನ ಚಿತ್ರಣಗಳಾಗಿದ್ದವು. ಜಗತ್ತಿನ ನೂರಾರು ಅತಿಥಿಗಳು ನಮ್ಮತ್ತ ಗಮನಿಸುತ್ತಿದ್ದು, ಈ ರೀತಿಯ ಅವ್ಯವಸ್ಥೆಗಳಿಂದಾಗಿ ಮುಜುಗರ ಉಂಟಾಗಿದೆ. ಈ ಬಗ್ಗೆ ಸೂಕ್ತ ಗಮನ ಹರಿಸಿ ಬ್ರ್ಯಾಂಡ್ ಬೆಂಗಳೂರಿನ ಮೌಲ್ಯವನ್ನು ಹೆಚ್ಚಿಸುವಂತೆ ಪತ್ರದಲ್ಲಿ ವಿನಂತಿಸಿದ್ದಾರೆ

ಟಿಸಿಎಸ್ ಸಂಸ್ಥೆ ಮಾಣಿಕ್ ಷಾ ಪರೇಡ್ ಮೈದಾನದಲ್ಲಿ ಏರ್ಪಡಿಸಿದ್ದ 10 ಕಿಮೀ ಮ್ಯಾರಥಾನ್‌ಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಚಾಲನೆ ನೀಡಿದರು. ಬಿಡಿಎ ಅಧ್ಯಕ್ಷ ಎನ್.ಎ.ಹ್ಯಾರೀಸ್, ಎಂಎಲ್‌ಸಿ ಮಂಜುನಾಥ್ ಭಂಡಾರಿ ಇದ್ದರು.

ಟಿಸಿಎಸ್ 10ಕೆ ಓಟ ಗ್ರೇಟರ್ ಬೆಂಗಳೂರಿನ ಹೆಮ್ಮೆ. ಓಟದಲ್ಲಿ 35 ಸಾವಿರಕ್ಕೂ ಹೆಚ್ಚು ಕ್ರೀಡಾರ್ಥಿಗಳು ಭಾಗವಹಿಸಿರುವುದು ಸಂತೋಷವಾಗಿದೆ. ಒಲಂಪಿಕ್ ಪದಕ ವಿಜೇತರು ಸೇರಿ 7 ಸಾವಿರಕ್ಕೂ ಹೆಚ್ಚು ಸ್ಪರ್ಧಾಳು ಭಾಗವಹಿಸಿದ್ದಾರೆ. ಬೆಳಗಿನ ಜಾವದಲ್ಲಿಯೂ ಸಾವಿರಾರು ಜನರು ಭಾಗವಹಿಸಿರುವುದು ನೋಡಿದರೆ ಕ್ರೀಡೆಯ ಮೇಲೆ ಇರುವ ಅಭಿಮಾನ ತಿಳಿಯುತ್ತದೆ. ಆಯೋಜಕರ ಶ್ರಮಕ್ಕೆ ಧನ್ಯವಾದ.
– ಡಿ.ಕೆ.ಶಿವಕುಮಾರ್ ಉಪಮುಖ್ಯಮಂತ್ರಿ

ಡಾ.ಪಲ್ಲವಿ ರಾಮಚಂದ್ರಗೆ ಯಶೋದರಾ ದಾಸಪ್ಪ ಪ್ರಶಸ್ತಿ

ಚುಂಚಾದ್ರಿ ಉತ್ಸವದಲ್ಲಿ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ವೈದ್ಯರಾದ ಡಾ.ಪಲ್ಲವಿ ರಾಮಚಂದ್ರ ಹಾಗೂ ಮಾಜಿ ಉಪಮೇಯರ್ ಹೇಮಲತಾ ಗೋಪಾಲಯ್ಯ ಅವರಿಗೆ ಯಶೋದರಾ ದಾಸಪ್ಪ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಬೆಂಗಳೂರು: ರಾಜ್ಯ ಚುಂಚಾದ್ರಿ ಮಹಿಳಾ ಪ್ರತಿಷ್ಠಾನ, ಮಾತೃ ಮಿಲನ ಕ್ರೀಡೆ ಹಾಗೂ ಸಾಂಸ್ಕೃತಿಕ ಸಂಘ, ವಿಶ್ವ ಒಕ್ಕಲಿಗರ ಮಹಿಳಾ ವೇದಿಕೆ ನಗರದಲ್ಲಿ ಆಯೋಜಿಸಿದ್ದ ಚುಂಚಾದ್ರಿ ಉತ್ಸವದಲ್ಲಿ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ವೈದ್ಯರಾದ ಡಾ.ಪಲ್ಲವಿ ರಾಮಚಂದ್ರ ಹಾಗೂ ಮಾಜಿ ಉಪಮೇಯರ್ ಹೇಮಲತಾ ಗೋಪಾಲಯ್ಯ ಅವರಿಗೆ ಯಶೋದರಾ ದಾಸಪ್ಪ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಆದಿಚುಂಚನಗಿರಿ ಮಹಾಸಂಸ್ಥಾನದ ಪ್ರಧಾನ ಕಾರ್ಯದರ್ಶಿ ಪ್ರಸನ್ನನಾಥ ಸ್ವಾಮೀಜಿ, ನಮ್ಮ ಸತ್ಕರ್ಮಗಳಿಂದ ಮಾತ್ರ ನಮ್ಮನ್ನು ಟೀಕಿಸುವವರಿಗೆ ಉತ್ತರ ಕೊಡಲು ಸಾಧ್ಯ. ಬದುಕಿನಲ್ಲಿ ಒಳ್ಳೆಯ ಕಾರ್ಯಗಳನ್ನು ಮಾಡುವುದಕ್ಕೆ ಅವಕಾಶ ಸಿಗುವುದು ಪುಣ್ಯದ ಕೆಲಸ. ಆ ನಿಟ್ಟಿನಲ್ಲಿ ಈ ಪ್ರಯತ್ನ ಪ್ರಶಂಸನೀಯ. ಸಾಧನೆಗೆ ಯಾವುದೇ ವಯೋಮಿತಿಯಿಲ್ಲ. ವಯಸ್ಸು ಮರೆತು ಇಲ್ಲಿ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದಾರೆ. ಪ್ರೋತ್ಸಾಹ ನೀಡಿದಾಗ ಎಂತಹ ಸಾಧನೆಗಳಾದರೂ ಸಾಧ್ಯ ಎಂದರು.

ಚುಂಚಾದ್ರಿ ಉತ್ಸವದ ಮೊದಲ ದಿನದ ಕ್ರೀಡೋತ್ಸವದಲ್ಲಿ ರಾಜ್ಯದ ನಾನಾ ಭಾಗಗಳಿಂದ ಆಗಮಿಸಿದ್ದ 14 ವಾಲಿಬಾಲ್ ತಂಡಗಳು ಹಾಗೂ 22 ಥ್ರೋಬಾಲ್ ತಂಡಗಳು ಭಾಗವಹಿಸಿದ್ದವು. ಈ ಕ್ರೀಡೋತ್ಸವದಲ್ಲಿ 18 ರಿಂದ 80 ವರ್ಷದ ಮಹಿಳೆಯರು ಭಾಗವಹಿಸಿದ್ದು ವಿಶೇಷವಾಗಿತ್ತು. ಹಾಗೆಯೇ ಎರಡನೇ ದಿನ 20 ಸಾಂಸ್ಕೃತಿಕ ತಂಡಗಳು ಭಾಗವಹಿಸಿದ್ದವು. ಈ ಎರಡು ಕಾರ್ಯಕ್ರಮಗಳು ಮಹಿಳೆಯರಲ್ಲಿನ ಅಗಾಧ ಪ್ರತಿಭೆಗೆ ಅತ್ಯುತ್ತಮ ವೇದಿಕೆಯೊದಗಿಸಿ ಕೊಟ್ಟವು. ಕ್ರೀಡೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿಜೇತರಾದವರಿಗೆ ನಗದು ಬಹುಮಾನ ನೀಡಲಾಯಿತು.

ವಿನ್ಯಾಸ ಕಲೆಗೆ ಬೇಡಿಕೆ ಹೆಚ್ಚಳ

ಬೆಂಗಳೂರು: ವಿನ್ಯಾಸದಲ್ಲಿ ಆಸಕ್ತಿಯುಳ್ಳ ವಿದ್ಯಾರ್ಥಿಗಳನ್ನು ಹುರಿದುಂಬಿಸುವ ಮತ್ತು ಇಂಡೋ-ಫ್ರೆಂಚ್ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸಂಬಂಧಗಳನ್ನು ಬಲಪಡಿಸುವ ಲಿಸಾ ಸ್ಕೂಲ್ ಅವರ ಬದ್ಧತೆ ಶ್ಲಾಘನೀಯ ಎಂದು ಫ್ರಾನ್ಸ್‌ನ ಕೌನ್ಸಲ್ ಜನರಲ್ ಮಾರ್ಕ್ ಲಾಮಿ ತಿಳಿಸಿದರು.

ನಗರದ ಲಿಸಾ ಸ್ಕೂಲ್ ಆಫ್ ಡಿಸೈನ್ ಆಯೋಜಿಸಿದ್ದ ಓಪನ್ ಡೇಸ್-2025 ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಸುಂದರವಾದ ಉತ್ಪನ್ನಗಳನ್ನು ಮಾತ್ರ ರಚಿಸದೆ ಸುಸ್ಥಿರತೆ, ಸಾಮಾಜಿಕ ಬದಲಾವಣೆ ಮತ್ತು ಕ್ರಿಯಾಶೀಲ ವಿಚಾರಗಳೊಂದಿಗೆ ವಿನ್ಯಾಸಗಳನ್ನು ರಚಿಸಿದ್ದಾರೆ. ಈ ಯುವ ವಿನ್ಯಾಸಕರು ಮುಂದಿನ ದಿನಗಳಲ್ಲಿ ಜಾಗತಿಕವಾಗಿ ತಮ್ಮ ಛಾಪು ಮೂಡಿಸುತ್ತಾರೆಂದು ನನಗೆ ವಿಶ್ವಾಸವಿದೆ, ಎಂದು ಹೇಳಿದರು.

ಕಾರ್ಯಕ್ರಮದ ಕುರಿತು ಲಿಸಾ ಬೆಂಗಳೂರು ನಿರ್ದೇಶಕ ಗಿರೀಶ್ ಕೆಸ್ವಾನಿ ಮಾತನಾಡಿ, ಓಪನ್ ಡೇಸ್ ಕಾರ್ಯಕ್ರಮ ವಿದ್ಯಾರ್ಥಿಗಳ ವಿನ್ಯಾಸ ಪ್ರದರ್ಶನಕ್ಕಿಂತ ಸೃಜನಾತ್ಮಕತೆ, ಸಮಸ್ಯೆ-ಪರಿಹರಿಸುವಿಕೆ, ಕಥೆ ಹೇಳುವಿಕೆ ಮತ್ತು ಸಹಭಾಗಿತ್ವಕ್ಕೆ ವೇದಿಕೆ ಎಂದು ಅಭಿಪ್ರಾಯಪಟ್ಟರು. ಲಿಸಾ ಸ್ಕೂಲ್ ಆಫ್ ಡಿಸೈನ್ ನಿರ್ದೇಶಕಿ ಅವಿ ಕೆಸ್ವಾನಿ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಪ್ರತಿಭೆ ಪ್ರದರ್ಶನದ ಜತೆಗೆ ತಮ್ಮಲ್ಲಿರುವ ಕೌಶಲ್ಯ ವ್ಯಕ್ತಪಡಿಸಲು ಉತ್ತಮ ವೇದಿಕೆ ಎಂದು ತಿಳಿಸಿದರು.

ನಗರದ ಲಿಸಾ ಸ್ಕೂಲ್ ಆಫ್ ಡಿಸೈನ್ ಆಯೋಜಿಸಿದ್ದ ಓಪನ್ ಡೇಸ್ 2025 ಕಾರ್ಯಕ್ರಮಕ್ಕೆ ಫ್ರಾನ್ಸ್‌ನ ಕೌನ್ಸಲ್ ಜನರಲ್ ಮಾರ್ಕ್ ಲಾಮಿ ಚಾಲನೆ ನೀಡಿದರು.

ಕ್ಷಯರೋಗಿಗಳಿಗೆ ಕಿಟ್ ವಿತರಣೆ

ಬೆಂಗಳೂರು: ಕ್ಷಯರೋಗಿಗಳಿಗೆ ಪೌಷ್ಟಿಕಾಂಶ ಕಿಟ್ ವಿತರಣಾ ಕಾರ್ಯಕ್ರಮ ಭಾನುವಾರ ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ನಾಗಪುರ ವಾರ್ಡ್‌ನ ಶಾಸಕರ ಕಚೇರಿಯಲ್ಲಿ ನಡೆಯಿತು. ಕಾರ್ಯಕ್ರಮದಲ್ಲಿ ಶಾಸಕ ಕೆ. ಗೋಪಾಲಯ್ಯ ಅವರ ಮಹಾಲಕ್ಷ್ಮಿ ಎಜುಕೇಶನ್ ಟ್ರಸ್ಟ್ ವತಿಯಿಂದ 160 ಕ್ಷಯ ರೋಗಿಗಳಿಗೆ ಪೌಷ್ಟಿಕಾಂಶ ಕಿಟ್ ವಿತರಣೆ ಮಾಡಲಾಯಿತು. ಜತೆಗೆ ಜಮ್ಮು ಕಾಶ್ಮೀರದ ಪಹಲ್ಗಾಮ್ ನಲ್ಲಿ ಉಗ್ರರಿಂದ ಹತರಾದ ಪ್ರವಾಸಿಗರಿಗೆ ಹಾಗೂ ನಿಧನರಾದ ವಿಜ್ಞಾನಿ ಡಾ.ಕೆ.ಕಸ್ತೂರಿರಂಗನ್ ಅವರ ಆತ್ಮಕ್ಕೆ ಶಾಂತಿ ಕೋರಿ ಮೌನಾಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಹಾಲಕ್ಷ್ಮಿ ಎಜುಕೇಶನ್ ಟ್ರಸ್ಟ್ ಅಧ್ಯಕ್ಷ ಜಯರಾಮಯ್ಯ, ನಗರ ಉತ್ತರ ಜಿಲ್ಲಾ ಬಿಜೆಪಿ ಅಧ್ಯಕ್ಷ ಎಸ್.ಹರೀಶ್, ಮಂಡಲ ಅಧ್ಯಕ್ಷ ರಾಘವೇಂದ್ರ ಶೆಟ್ಟಿ, ಮುಖಂಡರುಗಳಾದ ಬಿ.ಡಿ.ಶ್ರೀನಿವಾಸ್, ವೆಂಕಟೇಶ್, ರೈಲ್ವೆ ನಾರಾಯಣ, ವೆಂಕಟೇಶ್ ಮೂರ್ತಿ, ಜಯಸಿಂಹ, ರಾಘವೇಂದ್ರ, ಗಂಗಾ ಹನುಮಯ್ಯ ಉಪಸ್ಥಿತರಿದ್ದರು.

ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ನಾಗಪುರ ವಾರ್ಡ್‌ನ ಶಾಸಕರ ಕಚೇರಿಯಲ್ಲಿ ಭಾನುವಾರ ಕ್ಷಯರೋಗಿಗಳಿಗೆ ಪೌಷ್ಟಿಕಾಂಶ ಕಿಟ್ ವಿತರಣೆ ಮಾಡಲಾಯಿತು.

ಕುವೆಂಪು ವಿಶ್ವ ಒಕ್ಕಲಿಗರ ವೇದಿಕೆಯು ನಗರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಕುಲಪತಿ ಡಾ.ಭಗವಾನ್ ಅವರನ್ನು ಅಭಿನಂದಿಸಲಾಯಿತು. ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ, ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ನಿರ್ಮಲಾನಂದನಾಥ ಸ್ವಾಮೀಜಿ ಸೇರಿದಂತೆ ಮತ್ತಿತರಿದ್ದರು.

ವರನಟ ಡಾ.ರಾಜಕುಮಾರ್ ಅವರ ಜನ್ಮದಿನದ ಪ್ರಯುಕ್ತ ಭಾನುವಾರ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಆವರಣದಲ್ಲಿ ಏರ್ಪಡಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರಕ್ಕೆ ಡಿಸಿಎಂ ಡಿ.ಕೆ.ಶಿವಕುಮಾರ್ ಚಾಲನೆ ನೀಡಿದರು. ಶಾಸಕರಾದ ಎನ್.ಎ.ಹ್ಯಾರಿಸ್, ರಿಜ್ವಾನ್ ಅರ್ಷದ್, ಮಂಡಳಿ ಅಧ್ಯಕ್ಷ ನರಸಿಂಹಲು, ಕಾರ್ಯದರ್ಶಿ ಶಿಲ್ಪಾ ಶ್ರೀನಿವಾಸ್, ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಸಾಧು ಕೋಕಿಲ ಉಪಸ್ಥಿತರಿದ್ದರು.

ದಶಕದ ಬಳಿಕ ಎನ್‌ಜಿಟಿ ಆದೇಶ ಜಾರಿಗೊಳಿಸಲು ಮುಂದಾದ ಬಿಬಿಎಂಪಿ

ಸಿಗರೇಟು, ಬೀಡಿ ತುಂಡು ಬಿಸಾಡಿದರೂ ದಂಡ

ಬೆಂಗಳೂರು: ಸಾರ್ವಜನಿಕ ಸ್ಥಳಗಳಲ್ಲಿ ಧೂಮ ಪಾನ ಮಾಡಿದರಷ್ಟೆ ಅಲ್ಲ, ಎಲ್ಲೆಂದರಲ್ಲಿ ಸಿಗರೇಟು, ಬೀಡಿ ತುಂಡುಗಳನ್ನು ಬಿಸಾಡಿದರೂ ದಂಡ ತೆರಬೇಕಾಗುತ್ತದೆ ಹುಷಾರ್..!

ಸಿಗರೆಟ್, ಬೀಡಿ ತುಂಡು ಕೂಡ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಅವುಗಳನ್ನು ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡುವ ನಿಟ್ಟಿನಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಸ್ಥಳೀಯ ಸಂಸ್ಥೆಗಳು ಕಾರ್ಯೋನ್ಮುಖವಾಗಬೇಕೆಂದು ರಾಷ್ಟ್ರೀಯ ಹಸಿರು ನ್ಯಾಯಮಂಡಳಿ(ಎನ್‌ಜಿಟಿ) 2015ರಲ್ಲಿಯೇ ಆದೇಶ ನೀಡಿತ್ತು. ಇದಾಗಿ ದಶಕದ ಬಳಿಕ ಈ ಆದೇಶ ಜಾರಿಗೊಳಿಸಲು ಬಿಬಿಎಂಪಿ ಮುಂದಾಗಿದೆ.

ಕೇಂದ್ರ ಹಾಗೂ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಗಳು ಮೂರು ವರ್ಷಗಳ ಹಿಂದೆ ಸಿಗರೇಟು, ಬೀಡಿ ತುಂಡುಗಳಿಂದ ಸಾರ್ವಜನಿಕರ ಆರೋಗ್ಯದ ಮೇಲಾಗುತ್ತಿರುವ ದುಷ್ಪರಿಣಾಮಗಳನ್ನು ತಗ್ಗಿಸಲು ಹೊರಡಿಸಿದ್ದ ಮಾರ್ಗಸೂಚಿಯಂತೆ ಪಾಲಿಕೆಯು ಬೀಡಿ, ಸಿಗರೆಟ್ ತುಂಡುಗಳನ್ನು ಬಿಸಾಡುವವರ ವಿರುದ್ಧ ಸಮರ ಸಾರಿದೆ.

ಈ ಸಂಬಂಧ ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ನಿಯಮಿತ ಈಗಾಗಲೇ ಆದೇಶ ವನ್ನು ಹೊರಡಿಸಿದ್ದು, ಅದನ್ನು ಪರಿಣಾಮಕಾರಿ ಯಾಗಿ ಜಾರಿಗೊಳಿಸಲು ಮುಂದಾಗಿರುವ ಬಿಬಿ ಎಂಪಿ, ಆ ಕುರಿತು ಮಾರ್ಷಲ್‌ಗಳಿಗೆ ತರಬೇತಿ ಯನ್ನೂ ನೀಡಿ ಅವರನ್ನು ಕಾರ್ಯಾಚರಣೆಗಿಳಿಸಲು ಸಜ್ಜಾಗಿದೆ. ಪರಿಸರದ ಮೇಲೆ ದುಷ್ಪರಿಣಾಮ ಬೀರುತ್ತಿರುವ ಸಿಗರೆಟ್ ತುಂಡುಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ, ಘನತ್ಯಾಜ್ಯ ನಿರ್ವಹಣಾ ಉಪವಿಧಿಗಳು 2020ರ ಅನ್ವಯ 500 ರು. ದಂಡ ವಿಧಿಸಲು ಮಾರ್ಷಲ್‌ಗಳಿಗೆ ಅಧಿಕಾರ ನೀಡಲಾಗಿದೆ.

ಆದೇಶದಲ್ಲೇನಿದೆ?: ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಕಂಪನಿಯು ಕಳೆದ ಜ.17ರಂದು ಹೊರಡಿಸಿರುವ ಆದೇಶದಂತೆ ಪಾಲಿಕೆ ವ್ಯಾಪ್ತಿಯಲ್ಲಿನ ದಿನಸಿ ಅಂಗಡಿ, ವಾಣಿಜ್ಯ ಸಂಕೀರ್ಣಗಳು, ಬಾರ್ ಮತ್ತು ರೆಸ್ಟೋರೆಂಟ್‌ಗಳು ಮತ್ತು ಇತರೆಡೆ ಧೂಮಪಾನ ಮಾಡಿ ಸಿಗರೇಟು, ಬೀಡಿ ತುಂಡುಗಳನ್ನು ರಸ್ತೆ ಬದಿ, ಸಾರ್ವಜನಿಕ ಸ್ಥಳಗಳಲ್ಲಿ ಅವೈಜ್ಞಾನಿಕವಾಗಿ ವಿಲೇವಾರಿ ಮಾಡಲಾಗುತ್ತಿದ್ದು, ಅದು ಪರಿಸರ ಮಾಲಿನ್ಯಕ್ಕೆ ಕಾರಣವಾಗುತ್ತಿದೆ. ಹಾಗಾಗಿ ನಗರದ ಸ್ವಚ್ಛತೆ ಹಾಳಾಗುತ್ತಿದ್ದು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಮಾರ್ಗಸೂಚಿಯ ಅನ್ವಯ ವಿಲೇವಾರಿ ಮಾಡುವುದು ಅತ್ಯವಶ್ಯಕವಾಗಿದೆ ಎಂದು ಹೇಳಲಾಗಿದೆ.

ಕಸದ ರಾಶಿಗೆ ಸೇರ್ಪಡೆ: ಸದ್ಯ ಬೀಡಿ, ಸಿಗರೇಟು ತುಂಡುಗಳನ್ನು ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡಲು ಬಿಬಿಎಂಪಿಯಲ್ಲಿ ಯಾವುದೇ ಪ್ರಮಾಣೀಕೃತ ಕಾರ್ಯವಿಧಾನವಿಲ್ಲ. ಬಹುತೇಕ ಎಲ್ಲಾ ಸಿಗರೇಟು, ಬೀಡಿ ತುಂಡುಗಳನ್ನು ಕಸದ ಜತೆಯೇ ಸೇರಿಸಲಾಗುತ್ತದೆ. ಸಣ್ಣ ಪುಟ್ಟ ಅಂಗಡಿಗಳ ಮುಂದೆ ಸಿಗರೇಟು, ಬೀಡಿ ಸೇದುವ ಜನರು ತುಂಡುಗಳನ್ನು ಅಲ್ಲೆ ತುಳಿದು ಬೆಂಕಿ ಆರಿಸಿ ಹೊರಟು ಹೋಗುತ್ತಾರೆ. ಆನಂತರ ಅಂಗಡಿ ಮಾಲೀಕರು ಅದನ್ನು ಗುಡಿಸಿ ಕಸದ ಜತೆ ಹಾಕುತ್ತಿದ್ದಾರೆ.

ಎನ್‌ಜಿಟಿ ಆದೇಶವೇನಿತ್ತು?

ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ಜಾರಿ ಮತ್ತು ಸಿಗರೇಟು, ಬೀಡಿ ತುಂಡುಗಳ ವೈಜ್ಞಾನಿಕ ವಿಲೇವಾರಿಗೆ ಹೋರಾಡುತ್ತಿರುವ ಡಾಕ್ಟರ್ ಫಾರ್ ಯು ಸಂಸ್ಥೆ 2015ರಲ್ಲಿ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ(ಎನ್‌ಜಿಟಿ) ಮುಂದೆ ಅರ್ಜಿ ಹೂಡಿತ್ತು. ಅದನ್ನು ಆಲಿಸಿದ ಎನ್‌ಜಿಟಿ 2015ರಲ್ಲಿಯೇ ಬಟ್ಸ್‌ಗಳಲ್ಲಿಯೂ (ಬೀಡಿ, ಸಿಗರೇಟು ತುಂಡುಗಳು) ರಾಸಾಯನಿಕ ಹಾನಿಕಾರಕ ಅಂಶಗಳಿದ್ದು, ಅವುಗಳನ್ನು ತಡೆಯಲು ಕ್ರಮ ಕೈಗೊಳ್ಳುವಂತೆ ಕೇಂದ್ರ ಮತ್ತು ರಾಜ್ಯಗಳಿಗೆ ನಿರ್ದೇಶನ ನೀಡಿತ್ತು. ಬಳಿಕ ಕೇಂದ್ರ ಆರೋಗ್ಯ ಸಚಿವಾಲಯ 2017ರಲ್ಲಿ ಎಲ್ಲಾ ರಾಜ್ಯಗಳಿಗೂ ಅಗತ್ಯ ಕ್ರಮಕ್ಕೆ ಸೂಚಿಸಿತ್ತು. ಆನಂತರ 2020ರಲ್ಲಿ ಎನ್‌ಜಿಟಿ, ಸಿಗರೇಟು, ಬೀಡಿ ತುಂಡುಗಳ ಸಮರ್ಪಕ ವಿಲೇವಾರಿಗೆ ಸೂಕ್ತ ಮಾರ್ಗಸೂಚಿ ರೂಪಿಸುವಂತೆ ಕೇಂದ್ರ ಹಾಗೂ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಗಳಿಗೆ ಸೂಚಿಸಿತ್ತು. ಅದರಂತೆ ಕರ್ನಾಟಕದಲ್ಲಿ ರಾಜ್ಯ ತಂಬಾಕು ನಿಯಂತ್ರಣ ಮಂಡಳಿ ಸದಸ್ಯ ಹಾಗೂ ಕ್ಯಾನ್ಸರ್ ತಜ್ಞ ಡಾ. ಯು. ಎಸ್.ವಿಶಾಲ್ ರಾವ್ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿತ್ತು. ಆ ಸಮಿತಿ ಶಿಫಾರಸಿನಂತೆ ಕೆಎಸ್ಪಿಸಿಬಿ 2023ರಲ್ಲಿ ಮಾರ್ಗಸೂಚಿ ಹೊರಡಿಸಿತ್ತು.

ಹೊರಗಿನ ಶಕ್ತಿಗಳಿಂದ ನಮ್ಮ ಸಮುದಾಯ ಬಲಹೀನ

ಬೆಂಗಳೂರು: ಹೊರಗಿನ ಶಕ್ತಿಗಳು ನಮ್ಮ ಸಮುದಾಯವನ್ನು ಬಲಹೀನಗೊಳಿಸುತ್ತಿವೆ. ನಾವು ಪರಸ್ಪರ ಸಹಕಾರ ನೀಡುತ್ತಾ ಒಗ್ಗಟ್ಟಾಗಿರಬೇಕೇ ಹೊರತು ಕಾಲೆಳೆಯಲು ಹೋಗಬಾರದು' ಎಂದು ಅಖಿಲ ಭಾರತ ವೀರಶೈವ ಮಹಾಸಭಾ ರಾಜ್ಯಾಧ್ಯಕ್ಷ ಶಂಕರ್ ಮಹಾದೇವ ಬಿದರಿ ಸಲಹೆ ನೀಡಿದರು.

ಬಸವ ವಕೀಲ್ ಬ್ರಿಗೇಡ್ ಭಾನುವಾರ ಹಮ್ಮಿಕೊಂಡಿದ್ದ ಶಿವಕುಮಾರ ಸ್ವಾಮೀಜಿ ಅವರ ಜಯಂತ್ಯುತ್ಸವದಲ್ಲಿ ಮಾತನಾಡಿ, ಪರಸ್ಪರ ಗೌರವ ಕೊಟ್ಟು ಸಹಕಾರ ನೀಡಲು ಸಾಧ್ಯವಾಗದೇ ಇದ್ದರೆ ಬಾಯಿ ಮುಚ್ಚಿ ಕುಳಿತುಕೊಳ್ಳಬೇಕು. ನಮ್ಮ ಪಾಲಿನಲ್ಲಿ ಶೇಕಡಾ ಐದೋ ಹತ್ತೋ ಬೇರೆಯವರಿಗೆ ಹಂಚೋಣ. ಉಳಿದ ಶೇ.90ರಷ್ಟು ನಮಗೇ ಸಿಗಬೇಕು. ಪರಿಸ್ಥಿತಿ ಸರಿ ಇಲ್ಲ. ನಾವು ಜಾಗೃತರಾಗಿರಬೇಕು. ಏನು ಹೇಳಲು ಹೊರಟಿದ್ದೀನಿ ಎಂಬುದು ನಿಮಗೆಲ್ಲ ಅರ್ಥವಾಗುತ್ತದೆ. ಬಿಡಿಸಿ ಹೇಳುವುದಿಲ್ಲ ಎಂದು ಹೇಳಿದರು. ಕಾರ್ಯಕ್ರಮ ಉದ್ಘಾಟಿಸಿದ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಮಾತನಾಡಿ, ತಾನು ನಂಬಿದ ಸಿದ್ಧಾಂತವನ್ನು ಬದುಕಿನಲ್ಲಿ ಅಳವಡಿಸಿಕೊಂಡು ಕಾರ್ಯರೂಪಕ್ಕೆ ತಂದವರು ಸಿದ್ಧಗಂಗಾ ಮಠದ ಶಿವಕುಮಾರ ಸ್ವಾಮೀಜಿ. ಕಾಯಕ ತತ್ವ ಮತ್ತು ವಿದ್ಯಾದಾನವನ್ನು ಕೊನೇ ತನಕ ಮಾಡಿದರು ಎಂದು ಸ್ಮರಿಸಿದರು. ಜಾತಿ ಹೊಡೆದೋಡಿಸುವ ಪ್ರಯತ್ನ, ಸರಳ ಜೀವನ, ವಚನ ವಿಚಾರಧಾರೆ, ಎಲ್ಲವನ್ನು ಪ್ರೀತಿ ಮತ್ತು ಸಮಾನತೆಯಿಂದ ಕಾಣುವುದು ಅವರ ಚಿಂತನೆಗಳಾಗಿದ್ದವು. ಮಕ್ಕಳಿಗೆ ಊಟ, ವಸತಿ ನೀಡಿ, ವಿದ್ಯಾದಾನ ಮಾಡುವುದರ ಜತೆಗೆ ಸಮಾಜಕ್ಕೆ ತನ್ನ ವಿಚಾರಧಾರೆಗಳನ್ನು ಕಲಿಸಿ ಕೊಟ್ಟರು. ಆದರೆ, ನಾವು ಕಲಿತಿದ್ದೇವೆಯೇ ಎಂಬುದಷ್ಟೇ ಉಳಿದಿರುವ ಪ್ರಶ್ನೆ ಎಂದು ಹೇಳಿದರು.

12ನೇ ಶತಮಾನದಿಂದಲೇ ಕಲಿಸಲು ವಚನಕಾರರು ಆರಂಭಿಸಿದ್ದರು. ಕಲಿಸುವ ಪ್ರಕ್ರಿಯೆ ಈಗಲೂ ಮುಂದುವರಿದಿದೆ. ಅಂಗಲಿಂಗ ಸಾಧನೆ ಅಂದರೆ ದೇಹ ಮತ್ತು ದೇವನ ಸಂಬಂಧ, ಲೋಕಮುಖಿ ನೈತಿಕತೆ, ಸಮಾನ ಸಮಾಜ ಮತ್ತು ಕಾಯಕ ಧರ್ಮ ಪ್ರತಿಪಾದನೆಯನ್ನು ಶರಣರು ಮಾಡಿದ್ದರು. ಆದರೆ, ಈಗ ತನ್ಮಯತೆಯಿಂದ, ಸೇವಾ ಮನೋಭಾವದಿಂದ ನಾವು ಕೆಲಸ ಮಾಡುತ್ತಿದ್ದೇವೆಯೇ ಎಂಬುದನ್ನು ಪ್ರಶ್ನಿಸಿಕೊಳ್ಳಬೇಕು ಎಂದು ಹೇಳಿದರು.

ಬೆಂಗಳೂರು ದೊಡ್ಡಮಠದ ಶಿವಬಸವ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಭಾರತ ಸರಕಾರದ ಮಾಜಿ ಅಡಿಷನಲ್ ಸಾಲಿಸಿಟರ್ ಜನರಲ್ ಎಸ್.ಕಲ್ಯಾಣ ಬಸವರಾಜು ಅಧ್ಯಕ್ಷತೆ ವಹಿಸಿದ್ದರು. ಹೈಕೋರ್ಟ್ ವಕೀಲೆ ಪ್ರಮೀಳಾ ನೇಸರ್ಗಿ, ವಕೀಲ ಆರ್.ಬಿ.ಸದಾಶಿವಪ್ಪ, ಬೆಂಗಳೂರು ವಕೀಲರ ಸಂಘದ ಖಜಾಂಚಿ ಶ್ವೇತಾ ರವಿಶಂಕರ್, ಉಪಾಧ್ಯಕ್ಷ ಗಿರೀಶ್ ಕುಮಾರ್ ಭಾಗವಹಿಸಿದ್ದರು.

ಬಸವ ವಕೀಲ್ ಬ್ರಿಗೇಡ್ ಆಯೋಜಿಸಿದ್ದ ಶಿವಕುಮಾರ ಸ್ವಾಮೀಜಿ ಜಯಂತ್ಯುತ್ಸವದಲ್ಲಿ ಎಸ್.ಕಲ್ಯಾಣ್ ಬಸವರಾಜು, ನ್ಯಾ.ಬಿ.ಎಸ್.ಪಾಟೀಲ, ಶಂಕರ್ ಮಹಾದೇವ್ ಬಿದರಿ, ಪ್ರಮೀಳಾ ನೇಸರ್ಗಿ, ಶಿವಬಸವ ಸ್ವಾಮೀಜಿ ಅವರು ಸಿದ್ಧಗಂಗಾ ಶಿವಕುಮಾರ್ ಸ್ವಾಮೀಜಿಯವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

ಶಾಮನೂರಿಗೆ ಶಿವಶ್ರೀ ಪ್ರಶಸ್ತಿ ಪ್ರದಾನ

ಬೆಂಗಳೂರು: ಶಿಕ್ಷಣ, ವ್ಯಾಪಾರ ಮತ್ತು ರಾಜಕೀಯ ಕ್ಷೇತ್ರದಲ್ಲಿ ಶಾಮನೂರು ಶಿವಶಂಕರಪ್ಪ ಅವರು ಹಲವು ಸಾಧನೆ ಮಾಡಿದ್ದು, ನೂರಾರು ಜನರಿಗೆ ದಾರಿಯಾಗಿದ್ದಾರೆ. ಸಮಾಜಕ್ಕೆ ಅಂತಹವರ ಅಗತ್ಯ ಎಂದಿಗೂ ಇರುತ್ತದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು.

ನಿವೃತ್ತ ನ್ಯಾಯಮೂರ್ತಿ ಶಿವರಾಜ ವಿ.ಪಾಟೀಲ ಪ್ರತಿಷ್ಠಾನವು ನಗರದಲ್ಲಿ ಭಾನುವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಶಾಮನೂರು ಶಿವಶಂಕರಪ್ಪ ಅವರಿಗೆ 'ಶಿವಶ್ರೀ ಪ್ರಶಸ್ತಿ' ಪ್ರದಾನ ಮಾಡಿ ಮಾತನಾಡಿದ ಅವರು, ಶಿವಶಂಕರಪ್ಪ ಅವರು ನನಗೆ ಬಹಳ ಆಪ್ತರು. ಅವರು ಬೇರೆಯವರಿಗೆ ನೆರವು ನೀಡಿದ್ದನ್ನು ನಾನು ನೋಡಿದ್ದೇನೆ. ಸರಿಯಿಲ್ಲದ್ದನ್ನು ಸರಿ ಇಲ್ಲ ಎಂದು ಹೇಳಿದ್ದನ್ನೂ ಕಂಡಿದ್ದೇನೆ. ಅಂತಹವರು ಬಹಳ ಅಪರೂಪ ಎಂದರು. ನ್ಯಾಯಮೂರ್ತಿ ಶಿವರಾಜ ವಿ.ಪಾಟೀಲ ಅವರ ಸಂಚೆಗೊಂದು 'ನುಡಿ ಚಿಂತನ-365' ಕೃತಿಯನ್ನು ಮಲ್ಲಿಕಾರ್ಜುನ ಖರ್ಗೆ ಅವರು ಲೋಕಾರ್ಪಣೆ ಮಾಡಿದರು.

ನ್ಯಾಯಮೂರ್ತಿ ಶಿವರಾಜ ವಿ. ಪಾಟೀಲ ಪ್ರತಿಷ್ಠಾನ ನಗರದಲ್ಲಿ ಭಾನುವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಶಾಸಕ ಶಾಮನೂರು ಶಿವಶಂಕರಪ್ಪ ಅವರಿಗೆ ಮಲ್ಲಿಕಾರ್ಜುನ ಖರ್ಗೆ ಅವರು 'ಶಿವಶ್ರೀ ಪ್ರಶಸ್ತಿ' ಪ್ರದಾನ ಮಾಡಿದರು.

ಸಮಾಚಾರ ಸಣ್ಣದಲ್ಲ

ರಂಗಭೂಮಿ ಕಲಾವಿದೆ ತೆರೇಸಮ್ಮ ನಿಧನ

ಹುಬ್ಬಳ್ಳಿ: ರಂಗಭೂಮಿಯ ಹಿರಿಯ ಕಲಾವಿದೆ ತೆರೇಸಮ್ಮ ಡಿಸೋಜಾ (91) ಅನಾರೋಗ್ಯದಿಂದ ಭಾನುವಾರ ಇಲ್ಲಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಅವರಿಗೆ ರಂಗಭೂಮಿ ಕಲಾವಿದರಾದ ಬಾಬು ಮೈಸೂರು, ಫ್ರಾನ್ಸಿಸ್ ಮೈಸೂರು, ಹೆಲನ್ ಮೈಸೂರು ಪುತ್ರರಿದ್ದು, ಇನ್ನೊಬ್ಬ ಪುತ್ರಿ ಗೀತಾ ಖಾಸಗಿ ಉದ್ಯೋಗಿಯಾಗಿದ್ದಾರೆ. ತೆರೇಸಮ್ಮ ಅವರು ಗುಬ್ಬಿ ವೀರಣ್ಣ, ಎಚ್.ಕೆ.ಯೋಗಾನರಸಿಂಹ, ಸುಳ್ಳದ ದೇಸಾಯಿ ಅವರ ಕಂಪನಿಗಳಲ್ಲಿ ಕಲಾವಿದೆಯಾಗಿದ್ದರು. ಹರಕೆ, ಕರಿಮಾಯಿ, ನೆಂಟರು ಗಂಟು ಕಳ್ಳರು, ಮಾಗಿಯ ಕನಸು, ಹುಲಿ ಹೆಜ್ಜೆ, ಪಡುವಾರಳ್ಳಿ ಪಾಂಡವರು, ಅಮೃತ ಘಳಿಗೆ, ಸಂಗ್ಯಾಬಾಳ್ಯಾ, ಸಿಂಧೂರ ಲಕ್ಷ್ಮಣ, ಪತಿತ ಪಾವನಿ ಹಲವಾರು ಸಿನಿಮಾಗಳಲ್ಲಿ ನಟಿಸಿದ್ದರು. ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ, ಕಿತ್ತೂರು ಚೆನ್ನಮ್ಮ ಪ್ರಶಸ್ತಿ, ಗುಬ್ಬಿ ವೀರಣ್ಣ ಪ್ರಶಸ್ತಿ ಪುರಸ್ಕೃತರಾಗಿದ್ದರು. ಸೋಮವಾರ ಮಧ್ಯಾಹ್ನ 2 ಗಂಟೆಗೆ ಮುಕ್ತಿಧಾಮದಲ್ಲಿ ಅಂತ್ಯಕ್ರಿಯ ನಡೆಯಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

ಪಹಲ್ಗಾಮ್ ಪ್ರಕರಣ ರಾಜಕಾರಣ ಬೇಡ

ಹುಬ್ಬಳ್ಳಿ: ಪಹಲ್ಗಾಮ್ ಪ್ರಕರಣದಲ್ಲಿ ಯಾರೂ ರಾಜಕಾರಣ ಮಾಡಬಾರದು ಎಂದು ಕೇಂದ್ರ ಯುವಜನ ಸೇವಾ ಮತ್ತು ಕ್ರೀಡಾ ಖಾತೆ ರಾಜ್ಯ ಸಚಿವೆ ರಕ್ಷಾ ಖಾಡ್ಸೆ ಹೇಳಿದರು. ಸುದ್ದಿಗಾರರೊಂದಿಗೆ ಮಾತ ನಾಡಿ, ಉಗ್ರಗಾಮಿಗಳ ಕೃತ್ಯದ ವಿರುದ್ಧ ಕಠಿಣ ಕ್ರಮ ಕೈಗೊಳ್ಳುದಾಗಿ ಪ್ರಧಾನಿಗಳು ಹೇಳಿದ್ದಾರೆ. ಭಾರತದ ಪ್ರತಿಯೊಬ್ಬ ನಾಗರಿಕರಿಗೆ ಸುರಕ್ಷತೆ ಕೊಡುವುದು ಆದ್ಯ ಕರ್ತವ್ಯ. ಕಾಶ್ಮೀರದಲ್ಲಿ ನಡೆದ ಘಟನೆಗೆ ತಕ್ಕ ಉತ್ತರ ಕೊಡಲಾಗುತ್ತದೆ. ಕಲಂ 370 ವಾಪಸ್ ಪಡೆದ ನಂತರ ಜಮ್ಮು-ಕಾಶ್ಮೀರದ ಜನ ಹೊಸ ಜೀವನ ಆರಂಭಿಸಿದ್ದಾರೆ. ಕಾಶ್ಮೀರ ಭಾರತದ ಅವಿಭಾಜ್ಯ ಅಂಗ. ಇತರೆ ರಾಜ್ಯಗಳಂತೆ ಕಾಶ್ಮೀರವೂ ಅಭಿವೃದ್ಧಿಯಾಗಬೇಕಿದೆ ಎಂದರು. ಪ್ರವಾಸೋದ್ಯಮದ ಜತೆಗೆ ಎಲ್ಲ ಕ್ಷೇತ್ರಗಳಲ್ಲಿಯೂ ಅಭಿವೃದ್ಧಿಯಾಗಬೇಕಿದೆ. ಒಳ್ಳೆಯ ಯೋಜನೆ ಕೊಡಲು ಕೇಂದ್ರ ಸರಕಾರ ತಯಾರಿದೆ. ಅಲ್ಲಿ ನಡೆಯುತ್ತಿರುವ ಉಗ್ರಗಾಮಿ ಚಟುವಟಿಕೆ ಹತ್ತಿಕ್ಕಲು ಕೇಂದ್ರ ಎಲ್ಲ ರೀತಿಯ ಪ್ರಯತ್ನ ನಡೆಸಿದೆ. ಇದರಲ್ಲಿ ಯಾರೂ ರಾಜಕಾರಣ ಮಾಡಲು ಹೋಗಬಾರದು. ನಮ್ಮ ದೇಶದ ನಾಗರಿಕರ ಮೇಲೆ ದಾಳಿಯಾಗಿದೆ. ಎಲ್ಲ ಪಕ್ಷದ ನಾಯಕರೂ ಕೇಂದ್ರ ಸರಕಾರದ ಜತೆಗೆ ನಿಲ್ಲಬೇಕು. ಎಲ್ಲ ಪಕ್ಷಗಳೂ ಕೇಂದ್ರ ಸರಕಾರದ ಜತೆಗೆ ನಿಲ್ಲಲಿವೆ ಎನ್ನುವ ವಿಶ್ವಾಸವಿದೆ ಎಂದು ಹೇಳಿದರು.

ಸಾಲ ಕೊಟ್ಟವಳ ಕೊಲೆ ತಾಯಿ, ಮಕ್ಕಳ ಸೆರೆ

ಬೆಳಗಾವಿ: ಕೊಟ್ಟ ಹಣ ವಾಪಸ್ ಕೇಳಿದ್ದಕ್ಕೆ ಮಹಿಳೆಯನ್ನು ಕೊಲೆ ಮಾಡಿ ಆಭರಣ ಕದ್ದು ಪರಾರಿ ಆಗಿದ್ದ ಅಪ್ರಾಪ್ತ ಸೇರಿ ಮೂವರನ್ನು ಬೆಳಗಾವಿ ನಗರ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಏ.22ರಂದು ಅಂಜನಾ ದಡ್ಡಿಕರ್ (52) ಎಂಬುವವರನ್ನು ಬರ್ಬರವಾಗಿ ಹತ್ಯೆ ಮಾಡಿದ್ದ ಆರೋಪಿಗಳು ಚಿನ್ನಾಭರಣ ಕದ್ದು ಪರಾರಿಯಾಗಿದ್ದರು. ಈ ಕುರಿತು ಕ್ಯಾಂಪ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಅಂಜನಾ ಎಂಬ ಮೃತ ಮಹಿಳೆ ನಗರದ ಜ್ಯೋತಿ ಬಾಂದೇಕರ ಎಂಬುವವರಿಗೆ ಹಣ ಕೊಟ್ಟಿದ್ದರು. ಕೊಟ್ಟ ಹಣ ವಾಪಸ್ ಕೇಳಿದ್ದಕ್ಕೆ ಆರೋಪಿ ಮಹಿಳೆ ಜ್ಯೋತಿ ಬಾಂದೇಕರ ಆಕೆಯ ಪುತ್ರಿ ಸುಹಾನಿ ಬಾಂದೇಕರ್ ಹಾಗೂ ಅಪ್ರಾಪ್ತ ಪುತ್ರನ ಜತೆ ಮಹಿಳೆಯನ್ನು ಹತ್ಯೆ ಮಾಡಿ 1.70 ಲಕ್ಷ ಮೌಲ್ಯದ ಆಭರಣ ಕದ್ದು ಪರಾರಿ ಆಗಿದ್ದರು. ಸದ್ಯ ಬೆಳಗಾವಿ ನಗರ ಪೊಲೀಸರು ಆರೋಪಿಗಳನ್ನು ಬಂಧಿಸಿ 1.70 ಲಕ್ಷ ಮೌಲ್ಯದ ಆಭರಣ ಹಾಗೂ ಕೃತ್ಯಕ್ಕೆ ಬಳಸಿದ್ದ ವಾಹನ ಜಪ್ತಿ ಮಾಡಿದ್ದಾರೆ.

ಸಿಎಂ ಸಿದ್ದರಾಮಯ್ಯ ಪಾಕ್‌ನಲ್ಲಿ ಫೇಮಸ್

ಬೆಂಗಳೂರು: ಪಾಕಿಸ್ತಾನದ ವಿರುದ್ಧ ಯುದ್ಧ ಸಾರುವ ಅಗತ್ಯವಿಲ್ಲ. ಕಾಶ್ಮೀರದ ಪ್ರದೇಶದಲ್ಲಿ ಭದ್ರತಾ ಕ್ರಮಗಳನ್ನು ಬಿಗಿಗೊಳಿಸುವ ಕ್ರಮ ಕೈಗೊಳ್ಳಬೇಕು ಎಂದು ಹೇಳಿರುವ ಸಿಎಂ ಸಿದ್ದ ರಾಮಯ್ಯ ವಿರುದ್ಧ ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್.ಅಶೋಕ ವಾಗ್ದಾಳಿ ನಡೆಸಿದ್ದಾರೆ. ಸಿದ್ದರಾಮಯ್ಯ ಅವರ ಹೇಳಿಕೆಗಳು ಪಾಕಿ ಸ್ತಾನದ ಸುದ್ದಿ ವಾಹಿನಿಗಳಲ್ಲಿ ಬಿತ್ತರಿಸಿದ್ದವು. ಈ ಸಂಬಂಧ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಅಶೋಕ ಟೀಕಾಪ್ರಹಾರ ಮಾಡಿದ್ದಾರೆ. 'ಪಾಕಿಸ್ತಾನ ರತ್ನ' ಸಿಎಂ ಸಿದ್ದರಾಮಯ್ಯ ನವರೇ, ತಮ್ಮ ಬಾಲಿಶ, ಅಸಂಬದ್ಧ ಹೇಳಿಕೆಗ ಳಿಂದ ಈಗ ರಾತ್ರೋರಾತ್ರಿ ಪಾಕಿಸ್ತಾನದಲ್ಲಿ ವರ್ಲ್ಡ್ ಫೇಮಸ್ ಆಗಿಬಿಟ್ಟಿದ್ದೀರಿ. ತಮಗೆ ಅಭಿನಂದನೆಗಳು. ಮುಂದೆಂದಾದರೂ ತಾವು ಪಾಕಿಸ್ತಾನಕ್ಕೆ ಭೇಟಿ ಕೊಟ್ಟರೆ ತಮಗೆ ರಾಜಾತಿಥ್ಯ ಗ್ಯಾರಂಟಿ. ಪಾಕಿಸ್ತಾನದ ಪರ ವಕಾಲತ್ತು ವಹಿಸಿದ ಮಹಾನ್ ಶಾಂತಿದೂತ ಎಂದು ಪಾಕಿಸ್ತಾನ ಸರಕಾರ ತಮಗೆ ಅಲ್ಲಿನ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ 'ನಿಶಾನ್-ಎ- ಪಾಕಿ ಸ್ತಾನ' ಪ್ರಶಸ್ತಿ ಕೊಟ್ಟು ಸನ್ಮಾನ ಮಾಡಿದರೂ ಅಚ್ಚರಿಯಿಲ್ಲ ಎಂದು ವ್ಯಂಗ್ಯವಾಡಿದ್ದಾರೆ.

ದೇಶ ಅತ್ಯಂತ ಸೂಕ್ಷ್ಮ ಪರಿಸ್ಥಿತಿ ಎದುರಿಸುತ್ತಿರುವಾಗ, ಗಡಿಯಲ್ಲಿ ಯುದ್ಧದ ಕಾರ್ಮೋಡ ಕವಿದಿರುವಾಗ ಈ ರೀತಿ ಶತ್ರುರಾಷ್ಟ್ರದ ಕೈಗೊಂಬೆಯಂತೆ ವರ್ತಿಸುತ್ತಿದ್ದೀರಲ್ಲ, ನಿಮ್ಮಂತಹವರು ಸಾರ್ವಜನಿಕ ಬದುಕಿನಲ್ಲಿ ಇರುವುದೇ ನಮ್ಮ ದೇಶದ ಅತ್ಯಂತ ದೊಡ್ಡ ದುರಂತ.

-**ಆರ್.ಅಶೋಕ** ವಿಧಾನಸಭೆ ಪ್ರತಿಪಕ್ಷ ನಾಯಕ

ಇಬ್ಬರೂ ಕೋಟ್ಯಂತರ ರು. ವ್ಯವಹಾರ ಮಾಡಿರುವುದು ಇ.ಡಿ ಅಧಿಕಾರಿಗಳ ತನಿಖೆ ವೇಳೆ ಬಹಿರಂಗ

ವಿನಯ್-ಐಶ್ವರ್ಯಾ ನಂಟಿನ ರಹಸ್ಯ ಬೆಳಕಿಗೆ

ಬೆಂಗಳೂರು: ಮಾಜಿ ಸಂಸದ ಡಿ.ಕೆ.ಸುರೇಶ್ ಹೆಸರು ಬಳಸಿ ವಂಚಿಸಿದ್ದ ಐಶ್ವರ್ಯ ಗೌಡ ಪ್ರಕರಣದಲ್ಲಿ ಇ.ಡಿ ತನಿಖೆ ಚುರುಕುಗೊಳಿಸಿದ್ದಾರೆ.

ಶಾಸಕ ವಿನಯ್ ಕುಲಕರ್ಣಿ, ಐಶ್ವರ್ಯ ಗೌಡ ನಂಟಿನ ರಹಸ್ಯ ಬಯಲಾಗಿದ್ದು, ಇಬ್ಬರೂ ಕೋಟ್ಯಂತರ ರು. ವ್ಯವಹಾರ ಮಾಡಿವುದು ತನಿಖೆ ವೇಳೆ ಸ್ಫೋಟಕ ವಿಚಾರಗಳು ಬಹಿರಂಗವಾಗಿದೆ.

ಯೋಗೇಶ್ ಗೌಡ ಹತ್ಯೆ ಪ್ರಕರಣದಲ್ಲಿ ಸಹಾಯ ಮಾಡಿದ್ದ ಐಶ್ವರ್ಯ, ವಿನಯ್ ಕುಲಕರ್ಣಿ ಬಳಿ 24 ಕೋಟಿ ರು. ಸಾಲದ ರೂಪದಲ್ಲಿ ಪಡೆದಿದ್ದು, ದಿನಕ್ಕೆ 2.4 ಲಕ್ಷ ರು. ಬಡ್ಡಿ ಕೊಡುವುದಾಗಿ ಹೇಳಿರುವ ಅಂಶ ಬೆಳಕಿಗೆ ಬಂದಿದೆ. ಐಶ್ವರ್ಯ ಹಾಗೂ ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿ ನಡುವೆ 24 ಕೋಟಿ ರು. ವ್ಯವಹಾರ ನಡೆದಿದ್ದಕ್ಕಾಗಿ ಇ.ಡಿ ಅಧಿಕಾರಿಗಳು ಕುಲಕರ್ಣಿ ಮನೆ ಮೇಲೆ ದಾಳಿ ಮಾಡಿದ್ದು, ಸತತ 26 ಗಂಟೆ ದಾಳಿ ನಡೆಸಿ ಹಲವು ದಾಖಲೆಗಳನ್ನು ಸಂಗ್ರ ಹಿಸಿದೆ. ಯೋಗೇಶ್ ಗೌಡ ಕೊಲೆ ಪ್ರಕರಣದಲ್ಲೂ ಶಾಸಕ ವಿನಯ್ ಕುಲರ್ಣಿಗೆ ಸಹಾಯ ಮಾಡಿದ್ದಳು ಎನ್ನುವುದು ಬೆಳಕಿಗೆ ಬಂದಿದೆ.

ವಿನಯ್ ಕುಲಕರ್ಣಿ ಬಳಿ 24 ಕೋಟಿ ಸಾಲದ ರೂಪದಲ್ಲಿ ಪಡೆದಿದ್ದ ಐಶ್ವರ್ಯ, ದಿನಕ್ಕೆ ಶೇ.1ರಷ್ಟು ಬಡ್ಡಿ ಕೊಡುತ್ತೇನೆ ಎಂದಿದ್ದಳು. ಅಂದರೆ 24 ಕೋಟಿಗೆ ದಿನಕ್ಕೆ 2.4 ಲಕ್ಷ ರು. ಬಡ್ಡಿ ಕೊಡುವುದಾಗಿ ಹಣ ಪಡೆದಿದ್ದಳು. ಆದರೆ, ಹಣ ಪಡೆದ ನಂತರ ಅಸಲು, ಬಡ್ಡಿ ಕೊಡದೆ ಸಮಯ ಕೇಳಿಕೊಂಡಿದ್ದಳು. ಆಗ ವಿನಯ್ ಕುಲಕರ್ಣಿ ಐಶ್ವರ್ಯ ಜತೆ ಮಾತುಕತೆ ನಡೆಸಿ ಒಪ್ಪಂದ ಮಾಡಿಕೊಂಡಿರುವುದು ತನಿಖೆ ವೇಳೆ ಗೊತ್ತಾಗಿದೆ. 24 ಕೋಟಿ ರು. ಹಣಕ್ಕೆ ಸ್ನೇಹಿತನ ಹೆಸರಿನಲ್ಲಿ ಕೈಸಾಲ ಪಡೆದಿದ್ದಾಗಿ ಅಗ್ರಿಮೆಂಟ್ ಜತೆಗೆ ಮಾಫಿ ಸಾಕ್ಷಿ ಟ್ರ್ಯಾಪ್ ಮಾಡುವಂತೆ ಶಾಸಕ ವಿನಯ್ ಕುಲಕರ್ಣಿ ಟಾಸ್ಕ್ ನೀಡಿದ್ದರು.

